| | | | |
|---|---|---|---|
| 18 | ಹುಲ್ಲು ಮೆದೆಗೆ ಬೆಂಕಿ ಬಿದ್ದು, ಪರಿಹಾರ ಕೋರಿ ಮನವಿ | ಶ್ರೀ ರಂಗಯ್ಯ ಬಿನ್ ತಿಮ್ಮಯ್ಯ, ದೊಡ್ಡೇರಿಕಾವಲು-1, ನುಗ್ಗೇಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾ: ಇವರ ರಾಗಿಮೆದೆಗೆ ಬೆಂಕಿ ಬಿದ್ದು 6 ಗಾಡಿ ಹುಲ್ಲು, 10 ಚೀಲ ರಾಗಿ ಸಂಪೂರ್ಣ ನಾಶವಾಗಿದ್ದು, ಪರಿಹಾರವನ್ನು ನೀಡುವಂತೆ ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಮನವಿಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀ ರಂಗಯ್ಯ ಬಿನ್ ತಿಮ್ಮಯ್ಯ, ದೊಡ್ಡೇರಿಕಾವಲು -1, ನುಗ್ಗೇಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾ: ಇವರ ರಾಗಿಮೆದೆಗೆ ಬೆಂಕಿ ಬಿದ್ದು 6 ಗಾಡಿ ಹುಲ್ಲು, 10 ಚೀಲ ರಾಗಿ ಸಂಪೂರ್ಣ ನಾಶವಾಗಿರುವ ಹಿನ್ನೆಲೆಯಲ್ಲಿ ಪರಿಹಾರವಾಗಿ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳನ್ನು ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |
| | | ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, 2012-2013ನೇ ಸಾಲಿನ ಆರ್ಥಿಕ ವರ್ಷ ಮುಕ್ತಾಯವಾಗುತ್ತಿದ್ದು, ವಿವಿಧ ಇಲಾಖೆಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನವನ್ನು ವ್ಯಪಗತ ಮಾಡದಂತೆ, ವಿನಿಯೋಗಿಸಿ ಪ್ರಗತಿಯನ್ನು ಸಾಧಿಸಲು ಕ್ರಮ ವಹಿಸಬೇಕೆಂದು ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದರು. | |
| | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

(ಡಿ.ಜಿ.ಅಂಬಿಕರಾಮಣ್ಣ),
ಅಧ್ಯಕ್ಷರು,
ಜಿಲ್ಲಾ ಪಂಚಾಯತಿ, ಹಾಸನ

| | | | |
|---|---|---|---|
| | | | ಜಾಹೀರಾತನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 14 | ಹಿರಿಯರ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವ ಹಿರಿಯ ಕ್ರೀಡಾಪಟುಗಳಿಗೆ ಕ್ರೀಡಾ ಸಮವಸ್ತ್ರಗಳಿಗೆ ಧನಸಹಾಯ ನೀಡುವ ಬಗ್ಗೆ. | ಕಾರ್ಯದರ್ಶಿ, ಹಾಸನ ಜಿಲ್ಲಾ ಹಿರಿಯರ ಕ್ರೀಡಾ ಸಂಸ್ಥೆ, ಹಾಸನ ಇವರು ಮನವಿಯನ್ನು ಸಲ್ಲಿಸಿ ರಾಜ್ಯ ಹಿರಿಯರ ಅಥ್ಲೆಟಿಕ್ಸ್ ಸಂಸ್ಥೆ ಹಾಗೂ ಕೋಲಾರದ ಜಿಲ್ಲಾ ಹಿರಿಯರ ಅಥ್ಲೆಟಿಕ್ಸ್ ಸಂಸ್ಥೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ವಿವಿಧ ವಯೋಮಿತಿಯಲ್ಲಿ 23 ಚಿನ್ನ, 33 ಬೆಳ್ಳಿ ಹಾಗೂ 20 ಕಂಚಿನ ಪದಕಗಳನ್ನು ಗಳಿಸಿ ಜಿಲ್ಲೆಗೆ ಹೆಸರು ತಂದಿರುತ್ತಾರೆ ಹಾಗೂ 23 ಪುರುಷರು ಮತ್ತು 12 ಮಹಿಳೆಯರು ಏಪ್ರಿಲ್ ಮೊದಲನೇ ವಾರದಲ್ಲಿ ಬೆಂಗಳೂರಿನಲ್ಲಿ ನಡೆದ 34ನೇ ರಾಷ್ಟ್ರಮಟ್ಟದ ಹಿರಿಯರ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದು, ಸದರಿಯವರಿಗೆ ಕ್ರೀಡಾ ಸಾಮಗ್ರಿ ಕಿಟ್ ಮತ್ತು ಟ್ರ್ಯಾಕ್ ಸೂಟ್ ಇವುಗಳಿಗೆ ಒಬ್ಬೊಬ್ಬರು ರೂ.1000/–ದಂತೆ ಒಟ್ಟು ರೂ.35000/–ಗಳನ್ನು ರಾಜ್ಯ ಸಮಿತಿಗೆ ಕಟ್ಟಬೇಕಾಗಿದ್ದು, ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯದರ್ಶಿ, ಹಾಸನ ಜಿಲ್ಲಾ ಹಿರಿಯರ ಕ್ರೀಡಾ ಸಂಸ್ಥೆ, ಹಾಸನ ಇವರು ಕೋರಿರುವಂತೆ, 23 ಪುರುಷರು ಮತ್ತು 12 ಮಹಿಳೆಯರು ಏಪ್ರಿಲ್ ಮೊದಲನೇ ವಾರದಲ್ಲಿ ಬೆಂಗಳೂರಿನಲ್ಲಿ ನಡೆದ 34ನೇ ರಾಷ್ಟ್ರಮಟ್ಟದ ಹಿರಿಯರ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಹಿರಿಯ ಕ್ರೀಡಾಪಟುಗಳಿಗೆ ಜಿಲ್ಲಾ ಪಂಚಾಯಿತಿಯಿಂದ ರೂ.5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 15 | ನಿರುದ್ಯೋಗ (ಉಚಿತ ಮುದ್ರಣ) ತರಬೇತಿ ಶಿಬಿರಕ್ಕೆ ಆರ್ಥಿಕ ನೆರವು ನೀಡುವ ಕುರಿತು. | ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಪಟೇಲ್ ಶಿವರಾಂ ರವರು ಮನವಿಯನ್ನು ಸಲ್ಲಿಸಿ ಹಾಸನ ಜಿಲ್ಲಾ ಮುದ್ರಣಕಾರರ ಸಂಘದಿಂದ 100 ಜನ ನಿರುದ್ಯೋಗಿಗಳಿಗೆ ಮುದ್ರಣಾ ತರಬೇತಿ ನೀಡುತ್ತಿದ್ದು, ಇದಕ್ಕೆ ಸುಮಾರು ರೂ.1,20,000–00ಗಳು ಖರ್ಚಾಗುವುದರಿಂದ, ಸದರಿ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿಯಿಂದ ರೂ.25000/–ಗಳನ್ನು ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಪಟೇಲ್ ಶಿವರಾಂರವರು ಕೋರಿರುವಂತೆ, ಹಾಸನ ಜಿಲ್ಲಾ ಮುದ್ರಣ ಕಾರರ ಸಂಘದಿಂದ 100 ಜನ ನಿರುದ್ಯೋಗಿಗಳಿಗೆ ನೀಡುವ ಮುದ್ರಣ ತರಬೇತಿ ಶಿಬಿರಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನ ಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 16 | ರಕ್ಷಿತ್ ಪ್ರಸಾದ್ ಕೇಂದ್ರೀಯ ವಿದ್ಯಾಲಯ, ಹಾಸನ ಇವರಿಗೆ ರಾಷ್ಟ್ರಮಟ್ಟದ ಈಜು ಸ್ಪರ್ಧೆಯಲ್ಲಿ ಭಾಗವಹಿಸಿದ್ದು, ಇವರಿಗೆ ಆರ್ಥಿಕ ಸಹಾಯ ನೀಡುವ ಬಗ್ಗೆ. | ಶ್ರೀಮತಿ ರಾಣಿ ವಿ.ಎಸ್. ಜಿಲ್ಲಾ ಸಂಘಟಕರು, ಭಾರತ ಸೇವಾದಳ, ಹಾಸನ ಜಿಲ್ಲೆ, ಇವರು ಮನವಿಯನ್ನು ಸಲ್ಲಿಸಿ ಇವರ ಮಗನಾದ ರಕ್ಷಿತ್‌ಪ್ರಸಾದ್, ಹಾಸನ ನಗರದಲ್ಲಿರುವ ಕೇಂದ್ರೀಯ ವಿದ್ಯಾಲಯದಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಈತನು ಮಂಗಳೂರಿನಲ್ಲಿ ನಡೆದ ಕೇಂದ್ರೀಯ ವಿದ್ಯಾಲಯದ ಪ್ರಾಂತೀಯ (ರೀಜನಲ್) ಈಜು ಸ್ಪರ್ಧೆಯ ಮೂರು ವಿಭಾಗಗಳು, ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನವನ್ನು ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದು, ರಾಷ್ಟ್ರ ಮಟ್ಟದ ಈಜು ಸ್ಪರ್ಧೆಗೂ ಆಯ್ಕೆಯಾಗಿರುತ್ತಾನೆ. ಆದ್ದರಿಂದ, ಈತನಿಗೆ ಆರ್ಥಿಕ ಸಹಾಯವನ್ನು ಮಾಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀಮತಿ ರಾಣಿ ವಿ.ಎಸ್. ಜಿಲ್ಲಾ ಸಂಘಟಕರು, ಭಾರತ ಸೇವಾದಳ, ಹಾಸನ ಜಿಲ್ಲೆ ಇವರು ಕೋರಿರುವಂತೆ, ಇವರ ಮಗನಾದ ರಕ್ಷಿತ್‌ಪ್ರಸಾದ್ ಇವರು ಈಜು ಸ್ಪರ್ಧೆಯಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದು, ಈ ಸಂಬಂಧ ಜಿಲ್ಲಾ ಪಂಚಾಯಿತಿ ಯಿಂದ ರೂ.5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 17 | 2013ನೇ ಇಸವಿಯ ಡೈರಿಗಳನ್ನು ಹೆಚ್ಚುವರಿಯಾಗಿ ಮುದ್ರಿಸಿ ಸರಬರಾಜು ಮಾಡುವ ಬಗ್ಗೆ. | ಉಪಕಾರ್ಯದರ್ಶಿ (ಆಡಳಿತ)ರವರು ಮಾತನಾಡುತ್ತಾ, 2013ನೇ ಇಸವಿಯ 300 ಡೈರಿಗಳನ್ನು ಶ್ರೀ ನಂಜುಂಡೇಶ್ವರ ಪ್ರಿಂಟರ್ಸ್, ಬೆಂಗಳೂರು ಇವರು ಮುದ್ರಿಸಿ ಸರಬರಾಜು ಮಾಡಿರುತ್ತಾರೆ. ಸದರಿ ಡೈರಿಗಳನ್ನು ಮಾನ್ಯ ಅಧ್ಯಕ್ಷರು/ ಮಾನ್ಯ ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ವಿತರಣೆ ಮಾಡಲಾಗಿದೆ. ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಅಪೇಕ್ಷೆಯಂತೆ 2013ನೇ ಇಸವಿಯ 300 ಹೆಚ್ಚುವರಿ ಡೈರಿಗಳನ್ನು ಹಿಂದಿನ ದರದಲ್ಲಿಯೇ ಶ್ರೀ ನಂಜುಂಡೇಶ್ವರ ಪ್ರಿಂಟರ್ಸ್, ಬೆಂಗಳೂರು ಇವರಿಂದ ಮುದ್ರಿಸಿ ಸರಬರಾಜು ಮಾಡುವ ಬಗ್ಗೆ ಅನುಮತಿ ನೀಡುವಂತೆ ಸಭೆಯ ನಿರ್ಣಯಕ್ಕೆ ವಿಷಯವನ್ನು ಮಂಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2013ನೇ ಇಸವಿಯ 300 ಹೆಚ್ಚುವರಿ ಡೈರಿಗಳನ್ನು ಹಿಂದಿನ ದರದಲ್ಲಿಯೇ ಶ್ರೀ ನಂಜುಂಡೇಶ್ವರ ಪ್ರಿಂಟರ್ಸ್, ಬೆಂಗಳೂರು ಇವರಿಂದ ರೂ.92,418/– (ರೂಪಾಯಿ ತೊಂಬತ್ತೆರಡು ಸಾವಿರದ ನಾಲ್ಕು ನೂರ ಹದಿನೆಂಟು ಮಾತ್ರ) ಗಳಲ್ಲಿ ಮುದ್ರಿಸಿ ಸರಬರಾಜು ಮಾಡುವಂತೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| 10 | ಶ್ರೀ ಗಂಗಯ್ಯ ಬಿನ್ ನಿಂಗಯ್ಯ ಮೆಳ್ಳಹಳ್ಳಿ, ಚನ್ನರಾಯಪಟ್ಟಣ ತಾ: ಇವರಿಗೆ ಧನ ಸಹಾಯ ನೀಡುವ ಬಗ್ಗೆ | ಚನ್ನರಾಯಪಟ್ಟಣ ತಾಲ್ಲೂಕು, ಹಿರೀಸಾವೆ ಹೋಬಳಿ, ಮೆಳ್ಳಹಳ್ಳಿ ಗ್ರಾಮದ ನಿವಾಸಿಯಾದ ಶ್ರೀ ಗಂಗಯ್ಯ ಬಿನ್ ನಿಂಗಯ್ಯರವರ ಮಗನಾದ ಬಸವರಾಜುರವರು ದಿನಾಂಕ: 21-09-2012ರಂದು ಮೆಳಹಳ್ಳಿ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದು, ಧನಸಹಾಯಕ್ಕಾಗಿ ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಮನವಿಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಚನ್ನರಾಯಪಟ್ಟಣ ತಾಲ್ಲೂಕು, ಹಿರೀಸಾವೆ ಹೋಬಳಿ, ಮೆಳ್ಳಹಳ್ಳಿ ಗ್ರಾಮದ ನಿವಾಸಿಯಾದ ಗಂಗಯ್ಯ ಬಿನ್ ನಿಂಗಯ್ಯರವರ ಮಗನಾದ ಬಸವರಾಜುರವರು ದಿನಾಂಕ: 21-09-2012ರಂದು ಮೆಳಹಳ್ಳಿ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದು, ಈ ಸಂಬಂಧ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ಗಂಗಯ್ಯ ಬಿನ್ ನಿಂಗಯ್ಯ ಇವರಿಗೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 11 | ಅಗ್ನಿ ಅನಾಹುತಕ್ಕೆ ಪರಿಹಾರ ನೀಡುವ ಬಗ್ಗೆ | ಶ್ರೀ ನಾಗೇಶ್ ಬಿನ್ ಸಣ್ಣರಾಮೇಗೌಡ, ಸೋರೇಕಾಯಿಪುರ, ಸಬ್ಬನಹಳ್ಳಿ ಅಂಚೆ, ಹಿರೀಸಾವೆ ಹೋಬಳಿ, ಚನ್ನರಾಯಪಟ್ಟಣ ಇವರು ಮನವಿಯನ್ನು ಸಲ್ಲಿಸಿ ಸರ್ವೆ ನಂ.89/1ರಲ್ಲಿ 0.25 1/2 ಗುಂಟೆ ಜಮೀನು ಇದ್ದು, ಈ ಜಮೀನಿನಲ್ಲಿ ರೇಷ್ಮೆ ಕೃಷಿಯನ್ನು ಮಾಡಿಕೊಂಡಿದ್ದು, ಅದಕ್ಕಾಗಿ 60 *18 ಅಡಿಯ ಒಂದು ಶೆಡ್ ಅನ್ನು ನಿರ್ಮಿಸಿದ್ದು, ದಿನಾಂಕ: 21-01-2013 ರಂದು ಬೆಂಕಿ ಹತ್ತಿಕೊಂಡು ಉರಿದು ಹೋಗಿದ್ದು, ನಷ್ಟವಾಗಿರುತ್ತದೆ. ಆದ್ದರಿಂದ, ಸಹಾಯಧನವನ್ನು ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀ ನಾಗೇಶ್ ಬಿನ್ ಸಣ್ಣರಾಮೇಗೌಡ, ಸೋರೇಕಾಯಿಪುರ, ಸಬ್ಬನಹಳ್ಳಿ ಅಂಚೆ, ಹಿರೀಸಾವೆ ಹೋಬಳಿ, ಚನ್ನರಾಯಪಟ್ಟಣ ಇವರ ರೇಷ್ಮೆ ಹುಳು ಸಾಕಾಣಿಕೆಗಾಗಿ ನಿರ್ಮಿಸಿದ್ದ ಶೆಡ್‌ಗೆ ಬೆಂಕಿ ಬಿದ್ದು ಉರಿದು ಹೋಗಿರುವ ಸಂಬಂಧ ಜಿಲ್ಲಾ ಪಂಚಾಯಿತಿಯಿಂದ ರೂ.10000/-(ರೂಪಾಯಿ ಹತ್ತುಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 12 | ಹುಲ್ಲುಮೆದೆಗೆ ಬೆಂಕಿ ಬಿದ್ದು ಸುಟ್ಟು ಹೋಗಿರುವುದಕ್ಕೆ ಪರಿಹಾರ ನೀಡುವ ಬಗ್ಗೆ. | ಚನ್ನರಾಯಪಟ್ಟಣ ತಾಲ್ಲೂಕು ಹಿರೀಸಾವೆ ಹೋಬಳಿ, ಯಾಳನಹಳ್ಳಿ ಗ್ರಾಮದ ವೈ.ಕೆ.ಮಂಜೇಗೌಡರ ಮಗ ಐ.ಎಂ.ಶೇಖರ್‌ರವರು ಮನವಿಯನ್ನು ಸಲ್ಲಿಸಿ ತಮ್ಮ ಹಿತ್ತಲಿನಲ್ಲಿ ಒಟ್ಟಿದ್ದ ಹುಲ್ಲು ಮೆದೆಗೆ ಆಕಸ್ಮಿಕವಾಗಿ ಬೆಂಕಿ ಬಿದ್ದು ಸಂಪೂರ್ಣವಾಗಿ ಸುಟ್ಟುಹೋಗಿರುತ್ತದೆ. ಆದ್ದರಿಂದ, ಪರಿಹಾರವನ್ನು ಕೊಡಿಸಿಕೊಡುವಂತೆ ಮಾನ್ಯ ಅಧ್ಯಕ್ಷರು ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಕೋರಿರುತ್ತಾರೆ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಚನ್ನರಾಯಪಟ್ಟಣ ತಾಲ್ಲೂಕು ಹಿರೀಸಾವೆ ಹೋಬಳಿ, ಯಾಳನಹಳ್ಳಿ ಗ್ರಾಮದ ವೈ.ಕೆ.ಮಂಜೇಗೌಡರ ಮಗ ಐ.ಎಂ.ಶೇಖರ್‌ರವರ ಹುಲ್ಲುಮೆದೆಗೆ ಆಕಸ್ಮಿಕವಾಗಿ ಬೆಂಕಿ ಬಿದ್ದು ಸಂಪೂರ್ಣವಾಗಿ ಸುಟ್ಟುಹೋಗಿರುವ ಸಂಬಂಧ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 13 | ಹಾಸನವಾಣಿ ವಿಶೇಷಾಂಕಕ್ಕೆ ಜಾಹೀರಾತು ನೀಡುವ ಕುರಿತು. | ಶ್ರೀಮತಿ ಲೀಲಾವತಿ, ಸಂಪಾದಕರು, ಹಾಸನ ವಾಣಿ ಪತ್ರಿಕೆ ಇವರು ಮನವಿಯನ್ನು ಸಲ್ಲಿಸಿ ಹಾಸನ ವಾಣಿ ದಿನಪತ್ರಿಕೆ ಆರಂಭಗೊಂಡು 8 ವರ್ಷ ತುಂಬಿ 9ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿದೆ. ಹಾಸನ ವಾಣಿಯ ವಾರ್ಷಿಕೋತ್ಸವ, ಶ್ರೀ ವಿಜಯ ನಾಮ ಸಂವತ್ಸರದ ಯುಗಾದಿ ಹಬ್ಬ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯ ವಿರೋಧಿ ವರ್ಷಾಚರಣೆ ಅಂಗವಾಗಿ ಹಾಸನವಾಣಿ ಯುಗಾದಿ ವಿಶೇಷಾಂಕ-2013ನ್ನು ಹೊರತರಲಾಗುತ್ತಿದ್ದು, ಈ ಅವಿಸ್ಮರಣೀಯ ಯುಗಾದಿ ವಿಶೇಷಾಂಕಕ್ಕೆ ಹಾಸನ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.25000/-ಗಳ ಜಾಹೀರಾತನ್ನು ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀಮತಿ ಲೀಲಾವತಿ, ಸಂಪಾದಕರು, ಹಾಸನ ವಾಣಿ ಪತ್ರಿಕೆ ಇವರು ಕೋರಿರುವಂತೆ, ಹಾಸನ ವಾಣಿಯ ವಾರ್ಷಿಕೋತ್ಸವ, ಶ್ರೀ ವಿಜಯ ನಾಮ ಸಂವತ್ಸರದ ಯುಗಾದಿ ಹಬ್ಬ ಹಗೂ ಮಹಿಳೆಯರ ಮೇಲಿನ ದೌರ್ಜನ್ಯ ವಿರೋಧಿ ವರ್ಷಾಚರಣೆ ಅಂಗವಾಗಿ ಹಾಸನವಾಣಿ ಯುಗಾದಿ ವಿಶೇಷಾಂಕ-2013ಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.20000/-(ರೂಪಾಯಿ ಇಪ್ಪತ್ತು ಸಾವಿರ ಮಾತ್ರ)ಗಳ |

| | | | |
|---|---|---|---|
| | | ಬೇಲೂರು 925 0.37<br>ಸಕಲೇಶಪುರ 100 0.04<br>ಒಟ್ಟು 10000 4.00 | ಹಾಸನ 925 0.37<br>ಆಲೂರು - —<br>ಬೇಲೂರು 925 0.37<br>ಸಕಲೇಶಪುರ 100 0.04<br>ಒಟ್ಟು 10000 4.00 |
| 7 | ವಚನ ಸಾಹಿತ್ಯ ಸಮ್ಮೇಳನದಲ್ಲಿ ಭಾಗ ವಹಿಸಲು ಧನ ಸಹಾಯ ನೀಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಆ(8) 2187 ಝಡ್‌ಪಿಹೆಚ್-56 ಇತರೆ: 2012 ದಿನಾಂಕ: 17-01-2013ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ದಿನಾಂಕ: 26-12-2012ರಂದು ಆಂಧ್ರಪ್ರದೇಶದ ಹೈದರಾಬಾದ್‌ನಲ್ಲಿ ನಡೆಯುವ ಅಖಿಲಭಾರತ 2ನೇ ಕನ್ನಡಿಗರ ವಚನ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಲು ಶ್ರೀ ಶಿವಣ್ಣ ಎಸ್. ರಾಜಿಗೆರೆ, ಜಾನಪದ ಕಲಾವಿದರು, ಗೋಣಿ ಸೋಮನಹಳ್ಳಿ, ಬೇಲೂರು ತಾ: ಇವರ ತಂಡವು ಆಯ್ಕೆಯಾಗಿದ್ದು, ಹಾಸನ ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯ ನೀಡುವಂತೆ ಶ್ರೀ ಶಿವಣ್ಣ ಎಸ್. ರಾಜಿಗೆರೆ, ಜಾನಪದ ಕಲಾವಿದರು, ಗೋಣಿ ಸೋಮನಹಳ್ಳಿ, ಬೇಲೂರು ತಾ: ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀ ಶಿವಣ್ಣ ಎಸ್. ರಾಜಿಗೆರೆ, ಜಾನಪದ ಕಲಾವಿದರು, ಗೋಣಿಸೋಮನಹಳ್ಳಿ, ಬೇಲೂರು ತಾ: ಇವರು ಕೋರಿರುವಂತೆ ದಿ: 26-12-2012ರಂದು ಆಂಧ್ರಪ್ರದೇಶದ ಹೈದರಾಬಾದ್‌ನಲ್ಲಿ ನಡೆಯುವ ಅಖಿಲಭಾರತ 2ನೇ ಕನ್ನಡಿಗರ ವಚನ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಿದ್ದು, ಸದರಿಯವರಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 8 | ಹಾಸನ ತಾ: ಕಟ್ಟಾಯ ಪ್ರೌಢಶಾಲೆಯ 50ನೇ ವರ್ಷದ ಸುವರ್ಣ ಸಂಭ್ರಮ ಕಾರ್ಯಕ್ರಮಕ್ಕೆ ಧನ ಸಹಾಯ ನೀಡುವ ಬಗ್ಗೆ. | ಮುಖ್ಯೋಪಾಧ್ಯಾಯರು, ಸರ್ಕಾರಿ ಪ್ರೌಢಶಾಲೆ, ಕಟ್ಟಾಯ ಇವರು ಮನವಿಯನ್ನು ಸಲ್ಲಿಸಿ ಕಟ್ಟಾಯ ಪ್ರೌಢಶಾಲೆಯು 1963ರಲ್ಲಿ ಪ್ರಾರಂಭವಾಗಿದ್ದು, ದಿ: 04-01-2013 ಮತ್ತು 05-01-2013ರಂದು ಎರಡು ದಿನಗಳ ಕಾಲ ಸುವರ್ಣ ಸಂಭ್ರಮ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸದರಿ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯವನ್ನು ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮುಖ್ಯೋಪಾಧ್ಯಾಯರು, ಸರ್ಕಾರಿ ಪ್ರೌಢಶಾಲೆ, ಕಟ್ಟಾಯ ಇವರು ಕೋರಿರುವಂತೆ ದಿ: 04-01-2013 ಮತ್ತು 05-01-2013ರಂದು ಎರಡು ದಿನಗಳ ಕಾಲ ನಡೆದ ಸುವರ್ಣ ಸಂಭ್ರಮ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 9 | ಶ್ರೀ ಎಂ.ತಿಮ್ಮಯ್ಯ ಬಿನ್ ಮೂಡ್ಲಯ್ಯ, ಮೆಳ್ಳಹಳ್ಳಿ, ಚನ್ನರಾಯಪಟ್ಟಣ ತಾ: ಇವರಿಗೆ ಧನ ಸಹಾಯ ನೀಡುವ ಬಗ್ಗೆ | ಚನ್ನರಾಯಪಟ್ಟಣ ತಾಲ್ಲೂಕು, ಹಿರೀಸಾವೆ ಹೋಬಳಿ, ಮೆಳ್ಳಹಳ್ಳಿ ಗ್ರಾಮದ ನಿವಾಸಿಯಾದ ಶ್ರೀ ಎಂ.ತಿಮ್ಮಯ್ಯ ಬಿನ್ ಮೂಡ್ಲಯ್ಯರವರ ಮಗನಾದ ವಿಜಯಕುಮಾರರವರು ದಿನಾಂಕ: 21-09-2012ರಂದು ಮೆಳಹಳ್ಳಿ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದು, ಧನಸಹಾಯಕ್ಕಾಗಿ ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಮನವಿಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಚನ್ನರಾಯಪಟ್ಟಣ ತಾಲ್ಲೂಕು, ಹಿರೀಸಾವೆ ಹೋಬಳಿ, ಮೆಳ್ಳಹಳ್ಳಿ ಗ್ರಾಮದ ನಿವಾಸಿಯಾದ ಶ್ರೀ ಎಂ.ತಿಮ್ಮಯ್ಯ ಬಿನ್ ಮೂಡ್ಲಯ್ಯರವರ ಮಗನಾದ ವಿಜಯಕುಮಾರರವರು ದಿನಾಂಕ: 21-09-2012ರಂದು ಮೆಳಹಳ್ಳಿ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದು, ಈ ಸಂಬಂಧ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ಶ್ರೀ ಎಂ.ತಿಮ್ಮಯ್ಯ ಬಿನ್ ಮೂಡ್ಲಯ್ಯ ಇವರಿಗೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

6

2012–13ನೇ ಸಾಲಿನ ಜಿಲ್ಲಾ ಪಂಚಾಯಿತಿ ಲೆಕ್ಕಶೀರ್ಷಿಕೆ 2851–00–104–0–30 (ಯೋಜನೆ) ಮತ್ತು 2851–10–107–0–36 (ಯೋಜನೆ ತರಬೇತಿ) ಅಡಿ ರೇಷ್ಮೆ ಬೆಳೆ ಗಾರರಿಗೆ ಪ್ರೋತ್ಸಾಹ, ಸಹಾಯಧನ ನೀಡಲು ಪರಿಷ್ಕೃತ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು.

ಟಿಪ್ಪಣಿ ಸಂಖ್ಯೆ: ಜಿಪಂಹಾ/ಡಿ.ಆರ್.ಡಿ.ಎ/ಸಿಆರ್–84/2012–13 ದಿನಾಂಕ: 21–01–2013ನ್ನು ಸಭೆಯಲ್ಲಿ ಮಂಡಿಸಲಾಯಿತು.

ರೇಷ್ಮೆ ಕೃಷಿ ಉಪ ನಿರ್ದೇಶಕರು ಜಿಲ್ಲಾ ಪಂಚಾಯತ್ ಹಾಸನ ರವರು ಮಾತನಾಡುತ್ತಾ, ರೇಷ್ಮೆ ಬೆಳೆಗಾರರಿಗೆ ಸಹಾಯ ಕಾರ್ಯಕ್ರಮದ ಲೆಕ್ಕಶೀರ್ಷಿಕೆ 2851–00–104–0–30 (ಯೋಜನೆ) ಮತ್ತು ದ್ವಿತಳಿ ರೇಷ್ಮೆ ಗೂಡಿಗೆ ಪ್ರೋತ್ಸಾಹ ಧನ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2851–00–107–0–36 (ಯೋಜನೆ) ಗಳಡಿ ಜಿಲ್ಲಾ ಪಂಚಾಯತ್‌ನಿಂದ ಅನುಮೋದನೆಯಾಗಿರುವ ಪ್ರಕಾರ ಪ್ರತಿ ಕೆ.ಜಿಗೆ:ರೂ.400/–ಕ್ಕಿಂತ ಕಡಿಮೆ ದರದಲ್ಲಿ ಮಾರಾಟವಾದ ದ್ವಿತಳಿ ಬಿತ್ತನೆ ಗೂಡಿಗೆ ಗರಿಷ್ಠ ರೂ.40/–ರಂತೆ ಪ್ರೋತ್ಸಾಹ ಧನ ನೀಡಲಾಗುತ್ತಿತ್ತು.

ಆದರೆ 2012–13ನೇ ಸಾಲಿನಲ್ಲಿ ಇದುವರೆವಿಗೂ ಜಿಲ್ಲೆಯಲ್ಲಿ ಉತ್ಪಾದನೆಯಾದ ಹೆಚ್ಚಿನ ಪ್ರಮಾಣದ ದ್ವಿತಳಿ ಶುದ್ಧತಳಿ ಬಿತ್ತನೆ ಗೂಡು ಪ್ರತಿ ಕೆ.ಜಿ.ಗೆ ರೂ.400/–ಕ್ಕಿಂತ ಅಧಿಕ ದರದಲ್ಲಿ ಮಾರಾಟವಾಗುತ್ತಿರುವುದರಿಂದ, ಈ ಕಾರ್ಯಕ್ರಮಗಳನ್ನು ಬಿತ್ತನೆ ಪ್ರದೇಶದ ತಾಲ್ಲೂಕುಗಳಾದ ಹಾಸನ, ಆಲೂರು, ಬೇಲೂರು ಮತ್ತು ಅರಸೀಕೆರೆ ತಾಲ್ಲೂಕುಗಳಲ್ಲಿ ಅನುಷ್ಠಾನಗೊಳ್ಳಿಸುವುದು ಕಷ್ಟವಾಗಿದೆ.

ಆದಕಾರಣ ಈ ತಾಲ್ಲೂಕುಗಳಲ್ಲಿ ಉಳಿತಾಯವಾಗುವ ಅನುದಾನವನ್ನು ಜಿಲ್ಲೆಯ ಇನ್ನುಳಿದ ತಾಲ್ಲೂಕುಗಳಾದ ಚನ್ನರಾಯಪಟ್ಟಣ, ಅರಕಲಗೂಡು ಮತ್ತು ಹೊಳೆನಸೀಪುರ ತಾಲ್ಲೂಕುಗಳಲ್ಲಿ ಉತ್ಪಾದಿಸುತ್ತಿರುವ ದ್ವಿತಳಿ ಸಂಕರಣ/ಶುದ್ಧತಳಿ ಗೂಡಿಗೆ ಪ್ರೋತ್ಸಾಹ ಧನ ನೀಡಲು ರೂಪಿಸಿರುವ ಪರಿಷ್ಕೃತ ಕ್ರಿಯಾ ಯೋಜನೆಯನ್ನು ಮಾನ್ಯ ಜಿಲ್ಲಾ ಪಂಚಾಯತ್‌ನ ಸಾಮಾನ್ಯ ಸಭೆಯ ಅನುಮೋದನೆಗಾಗಿ ಮಂಡಿಸಿದೆ ಎಂದು ವಿವರಿಸಿದರು.

**2012–13ನೇ ಸಾಲಿನ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆ**

| ಕ್ರಸಂ | ಯೋಜನಾ ಲೆಕ್ಕಶೀರ್ಷಿಕೆ ಮತ್ತು ಯೋಜನೆ ಹೆಸರು | ತಾಲ್ಲೂಕು | 2012–13ನೇ ಸಾಲಿಗೆ ಅನುಮೋದನೆಗೊಂಡಿರುವ ಗುರಿ | |
|---|---|---|---|---|
| | | | ಭೌತಿಕ (ಕೆ.ಜಿ.ಗಳಲ್ಲಿ) | ಆರ್ಥಿಕ (ರೂ.ಲಕ್ಷಗಳಲ್ಲಿ) |
| 1 | 2851–00–104–0–30 (ಯೋಜನೆ) ರೇಷ್ಮೆ ಬೆಳೆಗಾರರಿಗೆ ಸಹಾಯ (ರೇಷ್ಮೆ ಗೂಡಿಗೆ ಪ್ರೋತ್ಸಾಹಧನ) | ಅರಸೀಕೆರೆ | 8625 | 3.45 |
| | | ಚನ್ನರಾಯಪಟ್ಟಣ | 17500 | 7.00 |
| | | ಹೊಳೆನರಸೀಪುರ | 1625 | 0.65 |
| | | ಅರಕಲಗೂಡು | 7500 | 3.00 |
| | | ಹಾಸನ | 7500 | 3.00 |
| | | ಆಲೂರು | 1500 | 0.60 |
| | | ಬೇಲೂರು | 5250 | 2.10 |
| | | ಸಕಲೇಶಪುರ | 500 | 0.20 |
| | | **ಒಟ್ಟು** | **50000** | **20.00** |
| 2 | 2851–00–107–0–36 (ಯೋಜನೆ)ತರಬೇತಿ ದ್ವಿತಳಿ ರೇಷ್ಮೆ ಗೂಡಿಗೆ ಪ್ರೋತ್ಸಾಹಧನ | ಅರಸೀಕೆರೆ | 1650 | 0.66 |
| | | ಚನ್ನರಾಯಪಟ್ಟಣ | 3250 | 1.30 |
| | | ಹೊಳೆನರಸೀಪುರ | 1250 | 0.50 |
| | | ಅರಕಲಗೂಡು | 1625 | 0.65 |
| | | ಹಾಸನ | 900 | 0.36 |
| | | ಆಲೂರು | 300 | 0.12 |

ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು

ಸಭೆಯಲ್ಲಿ ಪರಿಷ್ಕೃತ ಕ್ರಿಯಾ ಯೋಜನೆಯನ್ನು ಪರಿಶೀಲಿಸಲಾಯಿತು. ವಿಷಯದ ಬಗ್ಗೆ ಸಮಗ್ರವಾಗಿ ಚರ್ಚಿಸಿ ಕೆಳಕಂಡಂತೆ ಪರಿಷ್ಕೃತ ಕ್ರಿಯಾ ಯೋಜನೆಗೆ ಸರ್ವಾನುಮತದಿಂದ ಸಭೆಯು ಅನುಮೋದನೆ ನೀಡಿತು.

| ಕ್ರ ಸಂ | ಯೋಜನಾ ಲೆಕ್ಕಶೀರ್ಷಿಕೆ ಮತ್ತು ಯೋಜನೆ ಹೆಸರು | ತಾಲ್ಲೂಕು | 2012–13ನೇ ಸಾಲಿಗೆ ಪರಿಷ್ಕೃತ ಗುರಿ | |
|---|---|---|---|---|
| | | | ಭೌತಿಕ (ಕೆ.ಜಿ. ಗಳಲ್ಲಿ) | ಆರ್ಥಿಕ (ರೂ. ಲಕ್ಷ ಗಳಲ್ಲಿ) |
| 1 | 2851–00–104–0–30 (ಯೋಜನೆ) ರೇಷ್ಮೆ ಬೆಳೆಗಾರರಿಗೆ ಸಹಾಯ (ರೇಷ್ಮೆ ಗೂಡಿಗೆ ಪ್ರೋತ್ಸಾಹಧನ) | ಅರಸೀಕೆರೆ | 500 | 0.20 |
| | | ಚನ್ನರಾಯ ಪಟ್ಟಣ | 29375 | 11.75 |
| | | ಹೊಳೆನರ ಸೀಪುರ | 3375 | 1.35 |
| | | ಅರಕಲ ಗೂಡು | 15750 | 6.30 |
| | | ಹಾಸನ | – | – |
| | | ಆಲೂರು | – | – |
| | | ಬೇಲೂರು | 875 | 0.35 |
| | | ಸಕಲೇಶ ಪುರ | 125 | 0.05 |
| | | ಒಟ್ಟು | **50000** | **20.00** |
| 2 | 2851–00–107–0–36 (ಯೋಜನೆ) ತರಬೇತಿ ದ್ವಿತಳಿ ರೇಷ್ಮೆ ಗೂಡಿಗೆ ಪ್ರೋತ್ಸಾಹಧನ | ಅರಸೀಕೆರೆ | 900 | 0.36 |
| | | ಚನ್ನರಾಯ ಪಟ್ಟಣ | 3250 | 1.30 |
| | | ಹೊಳೆನರ ಸೀಪುರ | 1250 | 0.50 |
| | | ಅರಕಲ ಗೂಡು | 2650 | 1.06 |

<table>
<tr>
<td></td>
<td>ರೂ.11184.22/= ಲಕ್ಷಗಳ ಅನುದಾನಕ್ಕೆ ಅನುಮೋದನೆ ನೀಡುವ ಬಗ್ಗೆ.</td>
<td>ಸಭೆಗಳಲ್ಲಿ ಅನುಮೋದನೆಯನ್ನು ಪಡೆದಿರುವಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರಕ್ಕೆ ಅನುಮೋದನೆಗೆ ಸಲ್ಲಿಸಬೇಕಾಗಿದ್ದು, ಸಭೆಯ ಅನುಮೋದನೆ ನೀಡಬೇಕೆಂದು ಕೋರಿದರು.<br>
2013–14ನೇ ಸಾಲಿನ ಕಾರ್ಮಿಕ ಆಯವ್ಯಯ
<table>
<tr><th>ಕ್ರಸಂ</th><th>ತಾಲ್ಲೂಕು</th><th>ವ್ಯಾಲಿಡೇಟೆಡ್ ಜಾಬ್‌ಕಾರ್ಡ್ಸ್</th><th>ಕಾರ್ಮಿಕ ಆಯವ್ಯಯ (ಲಕ್ಷ ರೂಗಳಲ್ಲಿ)</th></tr>
<tr><td>1</td><td>ಆಲೂರು</td><td>6594</td><td>521.53</td></tr>
<tr><td>2</td><td>ಅರಕಲಗೂಡು</td><td>14236</td><td>1125.95</td></tr>
<tr><td>3</td><td>ಅರಸೀಕೆರೆ</td><td>23902</td><td>1890.45</td></tr>
<tr><td>4</td><td>ಬೇಲೂರು</td><td>16682</td><td>1319.65</td></tr>
<tr><td>5</td><td>ಚನ್ನರಾಯಪಟ್ಟಣ</td><td>28962</td><td>2290.66</td></tr>
<tr><td>6</td><td>ಹಾಸನ</td><td>26458</td><td>2092.61</td></tr>
<tr><td>7</td><td>ಹೊಳೆನರಸೀಪುರ</td><td>13019</td><td>1029.70</td></tr>
<tr><td>8</td><td>ಸಕಲೇಶಪುರ</td><td>11152</td><td>913.67</td></tr>
<tr><td></td><td>ಒಟ್ಟು</td><td>141008</td><td>11184.22</td></tr>
</table>
ಮಾನ್ಯ ಸದಸ್ಯರಾದ ಶ್ರೀ ಅಮಿತ್‌ಕುಮಾರ್‌ಶೆಟ್ಟಿರವರು ಮಾತನಾಡುತ್ತಾ, ತಮ್ಮ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಕೆಲಸವನ್ನು ಮಾಡಿದ್ದರೂ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಇದರಿಂದ, ಕೂಲಿ ಕಾರ್ಮಿಕರಿಗೆ ತೊಂದರೆಯಾಗಿರುತ್ತದೆ. ಗ್ರಾಮ ಪಂಚಾಯಿತಿಗಳಿಗೆ ಹಣವನ್ನು ಬಿಡುಗಡೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>
ಉಪಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ರಾಜ್ಯ ಮಟ್ಟದಲ್ಲಿ ಗಣಕ ಯಂತ್ರದಲ್ಲಿ ಸರ್ವರ್ ಸಮಸ್ಯೆಯಿದ್ದುದರಿಂದ, ಹಣವನ್ನು ಬಿಡುಗಡೆ ಮಾಡಲು ವಿಳಂಬವಾಗಿರುತ್ತದೆ. ಕೂಡಲೇ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ವಹಿಸುವುದಾಗಿ ತಿಳಿಸಿದರು.</td>
<td>ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿಗಳನ್ವಯ ಗ್ರಾಮ ಪಂಚಾಯಿತಿಯ ಗ್ರಾಮ ಸಭೆಗಳಲ್ಲಿ ಅನುಮೋದನೆಯನ್ನು ಪಡೆದಿರುವಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>
2013–14ನೇ ಸಾಲಿನ ಕಾರ್ಮಿಕ ಆಯವ್ಯಯ
<table>
<tr><th>ಕ್ರಸಂ</th><th>ತಾಲ್ಲೂಕು</th><th>ವ್ಯಾಲಿಡೇಟೆಡ್ ಜಾಬ್‌ಕಾರ್ಡ್ಸ್</th><th>ಕಾರ್ಮಿಕ ಆಯವ್ಯಯ (ಲಕ್ಷ ರೂಗಳಲ್ಲಿ)</th></tr>
<tr><td>1</td><td>ಆಲೂರು</td><td>6594</td><td>521.53</td></tr>
<tr><td>2</td><td>ಅರಕಲಗೂಡು</td><td>14236</td><td>1125.95</td></tr>
<tr><td>3</td><td>ಅರಸೀಕೆರೆ</td><td>23902</td><td>1890.45</td></tr>
<tr><td>4</td><td>ಬೇಲೂರು</td><td>16682</td><td>1319.65</td></tr>
<tr><td>5</td><td>ಚನ್ನರಾಯಪಟ್ಟಣ</td><td>28962</td><td>2290.66</td></tr>
<tr><td>6</td><td>ಹಾಸನ</td><td>26458</td><td>2092.61</td></tr>
<tr><td>7</td><td>ಹೊಳೆನರಸೀಪುರ</td><td>13019</td><td>1029.70</td></tr>
<tr><td>8</td><td>ಸಕಲೇಶಪುರ</td><td>11152</td><td>913.67</td></tr>
<tr><td></td><td>ಒಟ್ಟು</td><td>141008</td><td>11184.22</td></tr>
</table></td>
</tr>
<tr>
<td>5</td>
<td>ಹಾಸನ ತಾಲ್ಲೂಕು ದುದ್ದ ಹೋಬಳಿ, ಹೊಸಕೊಪ್ಪಲು ಗ್ರಾಮದಲ್ಲಿ ಆಯುಷ್ ಆಸ್ಪತ್ರೆಯನ್ನು ತೆರೆಯುವ ಬಗ್ಗೆ.</td>
<td>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮನವಿಯನ್ನು ಸಲ್ಲಿಸಿ, ಹಾಸನ ತಾಲ್ಲೂಕು ದುದ್ದ ಹೋಬಳಿ, ಹೊಸಕೊಪ್ಪಲು ಗ್ರಾಮದಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಿದ್ದು, ಸದರಿ ಶಾಲೆಯು ಕಾರಣಾಂತರಗಳಿಂದ ಮುಚ್ಚಿಹೋಗಿರುತ್ತದೆ. ಸದರಿ ಶಾಲೆಯಲ್ಲಿ 2 ಕೊಠಡಿಗಳಿದ್ದು, ಉತ್ತಮ ಸ್ಥಿತಿಯಲ್ಲಿರುತ್ತವೆ. ಆ ಭಾಗದಲ್ಲಿ ಸಾರ್ವಜನಿಕರಿಗೆ ಆಸ್ಪತ್ರೆ ಇಲ್ಲದ ಕಾರಣ ಹಾಲಿ ಹೊಸಕೊಪ್ಪಲು ಗ್ರಾಮದ ಶಾಲೆಯಲ್ಲಿ ಆಯುಷ್ ಆಸ್ಪತ್ರೆ ತೆರೆಯಲು ಹಾಗೂ ಕಟ್ಟಾಯ ಆಯುಷ್ ಕೇಂದ್ರದಲ್ಲಿರುವ ಇಬ್ಬರು ವೈದ್ಯರು ಹಾಗೂ ಇಬ್ಬರು ಗ್ರೂಪ್–ಡಿ ನೌಕರರಲ್ಲಿ ಒಬ್ಬ ವೈದ್ಯರನ್ನು ಹಾಗೂ ಒಬ್ಬ ಗ್ರೂಪ್–ಡಿ ನೌಕರರನ್ನು ಹೊಸಕೊಪ್ಪಲು ಆಯುಷ್ ಕೇಂದ್ರಕ್ಕೆ ನಿಯೋಜಿಸುವಂತೆ ಕೋರಿರುತ್ತಾರೆ.<br>
ಜಿಲ್ಲಾ ಆಯುಷ್ ವೈದ್ಯಾಧಿಕಾರಿಯವರು ಮಾತನಾಡುತ್ತಾ, ಕಟ್ಟಾಯ ಗ್ರಾಮದಲ್ಲಿರುವ ಆಯುಷ್ ಚಿಕಿತ್ಸಾಲಯದಲ್ಲಿ 2 ವೈದ್ಯ ಹುದ್ದೆಗಳು ಮತ್ತು ಒಬ್ಬ ಶುಶ್ರೂಷಕಿ ಮತ್ತು 2 ಗ್ರೂಪ್ –ಡಿ ಹುದ್ದೆಗಳು ಮಂಜೂರಾಗಿರುತ್ತವೆ. ಚಿಕಿತ್ಸಾಲಯ ಪ್ರಾರಂಭವಾದಾಗಿನಿಂದಲೂ ಒಬ್ಬರೇ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದು, ಇನ್ನೊಂದು ಹುದ್ದೆ ಖಾಲಿಯಿರುತ್ತದೆ. ಆದ್ದರಿಂದ, ಖಾಲಿಯಿರುವ ವೈದ್ಯ ಹುದ್ದೆಯನ್ನು ಹೊಸಕೊಪ್ಪಲು ಗ್ರಾಮಕ್ಕೆ ವರ್ಗಾವಣೆ ಮಾಡಿಕೊಂಡು ಹೊಸದಾಗಿ ಚಿಕಿತ್ಸಾಲಯವನ್ನು ಪ್ರಾರಂಭಿಸಬಹುದೆಂದು ಅಭಿಪ್ರಾಯಪಟ್ಟರು.</td>
<td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>
ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಕೋರಿರುವಂತೆ, ಹಾಸನ ತಾಲ್ಲೂಕು ದುದ್ದ ಹೋಬಳಿ, ಹೊಸಕೊಪ್ಪಲು ಗ್ರಾಮದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ 2 ಕೊಠಡಿಗಳಲ್ಲಿ ತಾತ್ಕಾಲಿಕವಾಗಿ ಆಯುಷ್ ಆಸ್ಪತ್ರೆಯನ್ನು ತೆರೆಯಲು ಮತ್ತು ಕಟ್ಟಾಯ ಆಯುಷ್ ಕೇಂದ್ರದಲ್ಲಿರುವ ಇಬ್ಬರು ವೈದ್ಯರು ಹಾಗೂ ಇಬ್ಬರು ಗ್ರೂಪ್–ಡಿ ನೌಕರರಲ್ಲಿ ಒಬ್ಬ ವೈದ್ಯರನ್ನು ಹಾಗೂ ಒಬ್ಬ ಗ್ರೂಪ್–ಡಿ ನೌಕರರನ್ನು ಹೊಸಕೊಪ್ಪಲು ಆಯುಷ್ ಕೇಂದ್ರಕ್ಕೆ ನಿಯೋಜಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.</td>
</tr>
</table>

| 14 | ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು | | |
|---|---|---|---|
| 1 | ಮೇಗಲಕೇರಿ ಶಾಲೆಯ ಶಿಥಿಲಗೊಂಡ ಕಟ್ಟಡಗಳನ್ನು ನೆಲಸಮಗೊಳಿಸಲು ಅನುಮತಿ ನೀಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಮನವಿಯನ್ನು ಸಲ್ಲಿಸಿ, ಚನ್ನರಾಯಪಟ್ಟಣ ತಾಲ್ಲೂಕಿನ ಮೇಗಲಕೇರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿರುವ ಕೊಠಡಿಗಳು ಶಿಥಿಲಗೊಂಡಿದ್ದು, ಮಕ್ಕಳ ಪಾಠ ಪ್ರವಚನಕ್ಕೆ ಬಹಳ ತೊಂದರೆಯಾಗಿರುತ್ತದೆ. ಆದುದರಿಂದ, ಶಿಥಿಲಗೊಂಡಿರುವ ಕೊಠಡಿಗಳನ್ನು ನೆಲಸಮಗೊಳಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಕೋರಿರುವಂತೆ, ಚನ್ನರಾಯಪಟ್ಟಣ ತಾಲ್ಲೂಕಿನ ಮೇಗಲಕೇರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿನ ಶಿಥಿಲಗೊಂಡಿರುವ ಕೊಠಡಿಗಳನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಚನ್ನರಾಯಪಟ್ಟಣ ಇವರ ತಾಂತ್ರಿಕ ಅನುಮೋದನೆಯೊಂದಿಗೆ ನೆಲಸಮಗೊಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 2 | ಹಾಸನ ತಾ: ಕಟ್ಟಾಯ ಹೋ: ಗೊರೂರಿನಲ್ಲಿರುವ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ ಹೊಸ ಕಟ್ಟಡ ಮಂಜೂರು ಮಾಡಿ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಮನವಿಯನ್ನು ಸಲ್ಲಿಸಿ, ಹಾಸನ ತಾ: ಕಟ್ಟಾಯ ಹೋ: ಗೊರೂರು ಗ್ರಾಮದಲ್ಲಿರುವ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಕಟ್ಟಡವು ತುಂಬಾ ಶಿಥಿಲಗೊಂಡಿದ್ದು, ಬೀಳುವ ಸ್ಥಿತಿಯಲ್ಲಿರುವುದರಿಂದ, ಕೊಠಡಿಯಲ್ಲಿ ಪಾಠ ಪ್ರವಚನ ಮಾಡಲು ಸಾಧ್ಯವಾಗುತ್ತಿಲ್ಲ. ಇದರಿಂದ, ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ, ಶಿಥಿಲಗೊಂಡಿರುವ ಕಟ್ಟಡವನ್ನು ನೆಲಸಮಗೊಳಿಸಿ ಹೊಸದಾಗಿ ಕಟ್ಟಡವನ್ನು ಮಂಜೂರು ಮಾಡಿ ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಕೋರಿರುವಂತೆ, ಹಾಸನ ತಾ: ಕಟ್ಟಾಯ ಹೋ: ಗೊರೂರು ಗ್ರಾಮದಲ್ಲಿರುವ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಕಟ್ಟಡವು ತುಂಬಾ ಶಿಥಿಲಗೊಂಡಿದ್ದು, ಬೀಳುವ ಸ್ಥಿತಿಯಲ್ಲಿರುವುದರಿಂದ, ಶಿಥಿಲಗೊಂಡಿರುವ ಕಟ್ಟಡವನ್ನು ನೆಲಸಮಗೊಳಿಸಿ ಹೊಸದಾಗಿ ಕಟ್ಟಡವನ್ನು ಮಂಜೂರು ಮಾಡಿ ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 3 | ಸತ್ಯಮಂಗಲ ಗ್ರಾಮ ಪಂಚಾಯಿತಿ ರಿಂಗ್ ರಸ್ತೆಯಲ್ಲಿನ ತ್ಯಾಜ್ಯ ವಸ್ತುಗಳನ್ನು ವಿಲೇವಾರಿ ಮಾಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮನವಿಯನ್ನು ಸಲ್ಲಿಸಿ, ಹಾಸನ ತಾಲ್ಲೂಕು, ಭೂವನಹಳ್ಳಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಸತ್ಯಮಂಗಲ ಗ್ರಾಮ ಪಂಚಾಯಿತಿಯ ರಿಂಗ್ ರಸ್ತೆ ಮತ್ತು ಅಕ್ಕಪಕ್ಕದ ರಸ್ತೆಗಳಲ್ಲಿ ಸಾರ್ವಜನಿಕರು ಬೆಳಿಗ್ಗೆ ವಾಯುವಿಹಾರ ಮಾಡುತ್ತಿದ್ದು, ಸದರಿ ರಸ್ತೆಗಳಲ್ಲಿ ಅಲ್ಲಿನ ನಿವಾಸಿಗಳು ಕಸದ ರಾಶಿ ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳನ್ನು ಆ ಜಾಗದಲ್ಲಿ ಸುರಿಯುತ್ತಿರುವುದರಿಂದ, ವಾಯುವಿಹಾರ ಮಾಡಲು ಕಲುಷಿತ ವಾತಾವರಣ ನಿರ್ಮಾಣಗೊಂಡು ಆ ರಸ್ತೆಗಳಲ್ಲಿ ಕೆಟ್ಟ ವಾಸನೆ ಬರುತ್ತಿರುತ್ತದೆ. ಆದುದರಿಂದ ಸದರಿ ತ್ಯಾಜ್ಯ ವಸ್ತುಗಳನ್ನು ಅಲ್ಲಿಂದ ವಿಲೇವಾರಿ ಮಾಡಿ ಇನ್ನು ಈ ಜಾಗಗಳಲ್ಲಿ ಕಸ ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳನ್ನು ಹಾಕದಂತೆ, ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಕೋರಿರುವಂತೆ, ಹಾಸನ ತಾಲ್ಲೂಕು ಸತ್ಯಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಿಂಗ್ ರಸ್ತೆ ಮತ್ತು ಅಕ್ಕಪಕ್ಕದ ರಸ್ತೆಗಳಲ್ಲಿ ತ್ಯಾಜ್ಯ ವಸ್ತುಗಳನ್ನು ಅಲ್ಲಿಂದ ವಿಲೇವಾರಿ ಮಾಡಿ ಇನ್ನು ಮುಂದೆ ಈ ಜಾಗಗಳಲ್ಲಿ ಕಸ ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳನ್ನು ಹಾಕದಂತೆ ಕ್ರಮ ವಹಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ, ಸತ್ಯಮಂಗಲ ಇವರಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 4 | ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2013-14ನೇ ಸಾಲಿನ ಕಾರ್ಮಿಕ ಆಯವ್ಯಯ | ಉಪಕಾರ್ಯದರ್ಶಿ (ಅಭಿವೃದ್ಧಿ)ರವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2013-14ನೇ ಸಾಲಿಗೆ ಭಾರತ ಸರ್ಕಾರದಿಂದ ಕಾರ್ಮಿಕ ಆಯವ್ಯಯ ರೂ.11184.22ಲಕ್ಷಗಳ ಅನುದಾನ ಮಂಜೂರಾಗಿದ್ದು, ತಾಲ್ಲೂಕುವಾರು ಜಾಬ್‌ಕಾರ್ಡ್ ಆಧಾರದ ಮೇಲೆ ಅನುದಾನವನ್ನು ಹಂಚಿಕೆ ಮಾಡಲಾಗಿದೆ. ತಾಲ್ಲೂಕುವಾರು ಹಂಚಿಕೆ ಮಾಡಿರುವ ಅನುದಾನಕ್ಕೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿಗಳನ್ವಯ ಗ್ರಾಮ ಪಂಚಾಯಿತಿಯ ಗ್ರಾಮ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2013-14ನೇ ಸಾಲಿಗೆ ಭಾರತ ಸರ್ಕಾರದಿಂದ ನಿಗದಿಪಡಿಸಿರುವ ಕಾರ್ಮಿಕ ಆಯವ್ಯಯ ರೂ.11184.22/= ಲಕ್ಷಗಳ ಅನುದಾನವನ್ನು ತಾಲ್ಲೂಕುವಾರು ಜಾಬ್‌ಕಾರ್ಡ್ ಆಧಾರದ ಮೇಲೆ ಅನುದಾನವನ್ನು ಹಂಚಿಕೆ ಮಾಡಿದ್ದು, |

<table>
<tr><td>10</td><td>ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಆಲೂರು ಇಲ್ಲಿನ ಶಿಥಿಲಗೊಂಡಿರುವ ಶಾಲಾ ಕೊಠಡಿಯನ್ನು ನೆಲಸಮ ಗೊಳಿಸಲು ಅನುಮತಿ ನೀಡುವಂತೆ ಕೋರಿ</td><td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(8)ಔಷಧ:10/2012-13 ದಿನಾಂಕ: 08-01-2013ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಪ್ರಸ್ತಾವನೆಯನ್ನು ಸಲ್ಲಿಸಿ ಆಲೂರು ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಕೊಠಡಿಯು ಶಿಥಿಲಗೊಂಡಿದ್ದು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಆಲೂರು ರವರು ಸದರಿ ಕೊಠಡಿಗಳು ಉಪಯೋಗಕ್ಕೆ ಯೋಗ್ಯವಿಲ್ಲದಿರುವುದಾಗಿ ಸ್ಥಳ ಪರಿಶೀಲಿಸಿ ವರದಿ ಮಾಡಿರುತ್ತಾರೆ. ಅದರಂತೆ, ಶಿಥಿಲಗೊಂಡಿರುವ ಶಾಲಾ ಕೊಠಡಿಯನ್ನು ನೆಲಸಮಗೊಳಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.</td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುವಂತೆ ಆಲೂರು ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಇಲ್ಲಿ ಶಿಥಿಲಗೊಂಡಿರುವ ಕೊಠಡಿಯನ್ನು ನೆಲಸಮಗೊಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.</td></tr>
<tr><td>11</td><td>ಜಿಲ್ಲಾ ವಾಲಿಬಾಲ್ ಪಂದ್ಯಾವಳಿಗೆ ಬಹುಮಾನಗಳಿಗಾಗಿ ಮನವಿ</td><td>ಟಿಪ್ಪಣಿ ಸಂಖ್ಯೆ: ಅ(8)ಇತರೆ: 2012 ದಿನಾಂಕ: 10-01-2013ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲಾ ಕ್ರೀಡಾ ಪರಿಷತ್ ವತಿಯಿಂದ ಗಣರಾಜ್ಯೋತ್ಸವ ಅಂಗವಾಗಿ ಪುರುಷರಿಗೆ ಮತ್ತು ಶಾಲಾ ಮಕ್ಕಳಿಗೆ ದಿನಾಂಕ: 26-01-2013 ಮತ್ತು 27-01-2013 ಎರಡು ದಿನಗಳು ಜಿಲ್ಲಾ ಮಟ್ಟದ ವಾಲಿಬಾಲ್ ಪಂದ್ಯಾವಳಿಯನ್ನು ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಸಲಿದ್ದು, ಸದರಿ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವಂತೆ ಅಧ್ಯಕ್ಷರು, ಹಾಸನ ಜಿಲ್ಲಾ ಕ್ರೀಡಾ ಪರಿಷತ್, ಹಾಸನ ಇವರು ಕೋರಿರುತ್ತಾರೆ.</td><td>ಟಿಪ್ಪಣಿ ಸಂಖ್ಯೆ: ಅ(8)2095:ಝಡ್‌ಪಿಹೆಚ್-54ಇತರೆ: 2012 ದಿನಾಂಕ: 27-12-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಅಧ್ಯಕ್ಷರು, ಹಾಸನ ಜಿಲ್ಲಾ ಕ್ರೀಡಾ ಪರಿಷತ್, ಹಾಸನ ಇವರು ಮನವಿಯನ್ನು ಸಲ್ಲಿಸಿ ದಿನಾಂಕ: 26-01-2013 ಮತ್ತು 27-01-2013ರಂದು ನಡೆಯುವ ಜಿಲ್ಲಾ ಮಟ್ಟದ ವಾಲಿಬಾಲ್ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.</td></tr>
<tr><td>12</td><td>ಸೆಪ್ಟೆಂಬರ್ -2012, ಅಕ್ಟೋಬರ್ -2012 ಮತ್ತು ನವೆಂಬರ್ -2012ರ ಮಾಹೆಯವರೆಗಿನ ಮಾಸಿಕ ಲೆಕ್ಕಗಳನ್ನು ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ಅನುಮೋದನೆಗೆ ಮಂಡಿಸುವ ಬಗ್ಗೆ.</td><td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ಸಂಕಲನ/ಮಾಸಿಕ ಲೆಕ್ಕ/2012-13 ದಿನಾಂಕ: 17-01-2013ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯತ್ ಹಾಸನದ ಸೆಪ್ಟೆಂಬರ್-2012, ಅಕ್ಟೋಬರ್-2012 ಮತ್ತು ನವೆಂಬರ್ -2012ರ ಮಾಹೆಯ ವರೆಗಿನ ಜಮಾ ಮತ್ತು ಖರ್ಚಿನ ತ:ಖ್ತೆಗಳು, ಚಲನ್ ಮತ್ತು ಓಚರ್‌ಗಳು ಸ್ವೀಕೃತವಾಗಿರುತ್ತವೆ. ಖಜಾನೆಯಿಂದ ಒಟ್ಟು ಜಮೆ ಮತ್ತು ಖರ್ಚಿನ ವಿವರಗಳನ್ನು ಪ್ರಧಾನಶೀರ್ಷಿಕೆವಾರು ಸಂಕಲನ ಗಣಕೀಕರಣದಲ್ಲಿ ತಯಾರಿಸಲಾಗಿದೆ. ಸದರಿ ಸಂಕಲನದ ತ:ಖ್ತೆಯಲ್ಲಿ ವಿವರ, ರಾಜಸ್ವ ಜಮೆ ಮತ್ತು ಬಂಡವಾಳ ವೆಚ್ಚಗಳನ್ನು ಶೀರ್ಷಿಕೆಗಳವಾರು ಕ್ರೋಢೀಕರಿಸಲಾಗಿದ್ದು, ಒಟ್ಟು ಜಮಾ ಮತ್ತು ಖರ್ಚಿಗೆ ಅನುಮೋದನೆ ನೀಡಬೇಕೆಂದು ಕೋರಿದರು.
<table>
<tr><td>ವಿವರ</td><td>ಸೆಪ್ಟೆಂಬರ್-2012</td><td>ಅಕ್ಟೋಬರ್-2012</td><td>ನವೆಂಬರ್-2012</td></tr>
<tr><td>ಜಮೆ</td><td>ರೂ.37,91,15,989-00</td><td>ರೂ.17,22,67,993.00</td><td>ರೂ.11,39,62,993-00</td></tr>
<tr><td>ಖರ್ಚು</td><td>ರೂ.15,54,95,508-00</td><td>ರೂ.15,85,98,245-00</td><td>ರೂ.16,25,44,278-00</td></tr>
</table></td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಪಂಚಾಯತ್ ಹಾಸನದ ಸೆಪ್ಟೆಂಬರ್-2012, ಅಕ್ಟೋಬರ್-2012 ಮತ್ತು ನವೆಂಬರ್ -2012ರ ಮಾಹೆಯ ವರೆಗಿನ ಜಮಾ ಮತ್ತು ವೆಚ್ಚಗಳಿಗೆ ಸಭೆಯಲ್ಲಿ ಸರ್ವಾನುಮತದಿಂದ ಅನುಮೋದನೆಯನ್ನು ನೀಡಲಾಯಿತು.<br>ರೂ.ಗಳಲ್ಲಿ
<table>
<tr><td>ವಿವರ</td><td>ಸೆಪ್ಟೆಂಬರ್-2012</td><td>ಅಕ್ಟೋಬರ್-2012</td><td>ನವೆಂಬರ್-2012</td></tr>
<tr><td>ಜಮೆ</td><td>37,91,15,989</td><td>17,22,67,993</td><td>11,39,62,993</td></tr>
<tr><td>ಖರ್ಚು</td><td>15,54,95,508</td><td>15,85,98,245</td><td>.16,25,44,278</td></tr>
</table></td></tr>
<tr><td>13</td><td>ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿಗೆ 2012-13ನೇ ಸಾಲಿನಲ್ಲಿ ಅಕ್ಟೋಬರ್, ನವೆಂಬರ್, ಡಿಸೆಂಬರ್ ಮತ್ತು ಜನವರಿ 2013ರ ಮಾಹೆಗಳಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ.</td><td>ಲೆಕ್ಕ ಅಧೀಕ್ಷಕರು 2012-13ನೇ ಸಾಲಿನಲ್ಲಿ ಅಕ್ಟೋಬರ್, ನವೆಂಬರ್, ಡಿಸೆಂಬರ್ ಮತ್ತು ಜನವರಿ 2013ರ ಮಾಹೆಗಳಲ್ಲಿ ಜಿಲ್ಲಾ ಪಂಚಾಯಿತಿಗೆ ಬಿಡುಗಡೆಯಾದ ಅನುದಾನದ ವಿವರಗಳನ್ನು ಸಭೆಯ ಅವಗಾಹನೆಗೆ ಮಂಡಿಸಿದರು.</td><td>2012-13ನೇ ಸಾಲಿನಲ್ಲಿ ಅಕ್ಟೋಬರ್, ನವೆಂಬರ್, ಡಿಸೆಂಬರ್ ಮತ್ತು ಜನವರಿ 2013ರ ಮಾಹೆಗಳಲ್ಲಿ ಜಿಲ್ಲಾ ಪಂಚಾಯಿತಿಗೆ ಬಿಡುಗಡೆಯಾದ ಅನುದಾನದ ವಿವರಗಳನ್ನು ಸಭೆಯು ಅವಗಾಹಿಸಿತು.</td></tr>
</table>

| | | | |
|---|---|---|---|
| 6 | ರಂಗ ತರಬೇತಿ ಮತ್ತು ನಾಟಕೋತ್ಸವಕ್ಕೆ ನೆರವು ಕೋರಿ | ಟಿಪ್ಪಣಿ ಸಂಖ್ಯೆ: ಅ(8)1932:ಝಡ್‌ಪಿಹೆಚ್–42 ಇತರೆ: 2012 ದಿನಾಂಕ: 30–11–2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲೆಯಲ್ಲಿ 20 ವರ್ಷಗಳಿಂದ ರಂಗಸಿರಿ ಸಂಸ್ಥೆಯು ನಿರಂತರವಾಗಿ ರಂಗ ಚಟುವಟಿಕೆ, ಮಕ್ಕಳಿಗೆ ತರಬೇತಿ, ಕಾಲೇಜು ನಾಟಕೋತ್ಸವ ಮತ್ತಿತರ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದು, ಈ ಬಾರಿಯೂ ಹಾಸನದಲ್ಲಿ ರಂಗ ತರಬೇತಿ ಕಾರ್ಯಕ್ರಮ ಹಾಗೂ ನಾಟಕೋತ್ಸವ ನಡೆಸಲು ಉದ್ದೇಶಿಸಿದ್ದು, ಇದಕ್ಕಾಗಿ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.25000/–ಗಳ ಧನಸಹಾಯವನ್ನು ನೀಡಬೇಕೆಂದು ಕಾರ್ಯದರ್ಶಿ, ರಂಗಸಿರಿ ಹವ್ಯಾಸಿ ಕಲಾ ತಂಡ, ಸಿ.ಎಸ್.ಐ.ಶಾಲಾ ಆವರಣ, ಬಸ್ ನಿಲ್ದಾಣ ರಸ್ತೆ, ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯದರ್ಶಿ, ರಂಗಸಿರಿ ಹವ್ಯಾಸಿ ಕಲಾ ತಂಡ, ಹಾಸನ ಇವರು ಕೋರಿರುವಂತೆ ರಂಗಸಿರಿ ಸಂಸ್ಥೆಯ ವತಿಯಿಂದ ಹಾಸನದಲ್ಲಿ ಆಯೋಜಿಸುವ ರಂಗ ತರಬೇತಿ ಕಾರ್ಯಕ್ರಮ ಹಾಗೂ ನಾಟಕೋತ್ಸವ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 7 | ರಾಜ್ಯ ಮಟ್ಟದ 5ನೇ ಕರ್ನಾಟಕ ರಂಗಸಂಗೀತ ಪರಿಷತ್‌ನ ವಾರ್ಷಿಕ ಸಮ್ಮೇಳನಕ್ಕೆ ಧನಸಹಾಯ ನೀಡುವ ಕುರಿತು. | ಟಿಪ್ಪಣಿ ಸಂಖ್ಯೆ: ಅ(8)2072:ಝಡ್‌ಪಿಹೆಚ್–50ಇತರೆ: 2012 ದಿನಾಂಕ: 19–12–2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ದಿನಾಂಕ: 22–12–2012 ಮತ್ತು 23–12–2012ರಂದು ರಾಜ್ಯ ಮಟ್ಟದ 5ನೇ ರಂಗಸಂಗೀತ ಸಮ್ಮೇಳನವನ್ನು ಹಾಸನ ಜಿಲ್ಲಾ ರಂಗಸಂಗೀತ ಪರಿಷತ್‌ನ ಸಂಯುಕ್ತ ಆಶ್ರಯದ ವತಿಯಿಂದ ಹಾಸನ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಏರ್ಪಡಿಸಲಾಗಿದ್ದು, ಈ ಸಂಬಂಧ ಹಾಸನ ಜಿಲ್ಲೆಯ ಹಿರಿಯ ಕಲಾವಿದರನ್ನು ಸಮ್ಮೇಳನಾಧ್ಯಕ್ಷರನ್ನಾಗಿ ಮಾಡಿ " ಕರ್ನಾಟಕ ರಂಗಸಂಗೀತ ರತ್ನ" ಪ್ರಶಸ್ತಿ ನೀಡಿ ಗೌರವಿಸುವುದು ಮತ್ತು ಜಿಲ್ಲೆಯ ಹಿರಿಯ ರಂಗಭೂಮಿ ಕಲಾವಿದರಿಗೆ " ರಂಗಕೌಸ್ತುಭ" ಪ್ರಶಸ್ತಿ ನೀಡಲಿದ್ದು, ಈ ಸಮ್ಮೇಳನಕ್ಕೆ 3000 ರಿಂದ 4000 ವರೆಗೆ ರಂಗಕಲಾವಿದರು ಆಗಮಿಸುವ ನಿರೀಕ್ಷೆಯಿದ್ದು, ಸುಮಾರು ರೂ.15.00ಲಕ್ಷಗಳವರೆಗೆ ವೆಚ್ಚವಾಗಲಿದ್ದು, ಹಾಸನ ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯ ನೀಡುವಂತೆ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಂಗಸಂಗೀತ ಪರಿಷತ್ (ರಿ) ಹಾಸನ ಜಿಲ್ಲಾ ಶಾಖೆ, ಶಾಂತಿನಗರ, ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಂಗಸಂಗೀತ ಪರಿಷತ್ (ರಿ) ಹಾಸನ ಜಿಲ್ಲಾ ಶಾಖೆ, ಶಾಂತಿನಗರ, ಹಾಸನ ಇವರು ಕೋರಿರುವಂತೆ ದಿನಾಂಕ:22–12–2012 ಮತ್ತು 23–12–2012ರಂದು ನಡೆದ ರಾಜ್ಯ ಮಟ್ಟದ 5ನೇ ರಂಗಸಂಗೀತ ಸಮ್ಮೇಳನಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 8 | ಕನ್ನಡ ರಾಜ್ಯೋತ್ಸವವನ್ನು ಆಚರಿಸಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವ ಕುರಿತು. | ಟಿಪ್ಪಣಿ ಸಂಖ್ಯೆ: ಅ(8)2095:ಝಡ್‌ಪಿಹೆಚ್–54ಇತರೆ: 2012 ದಿನಾಂಕ: 27–12–2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಅಧ್ಯಕ್ಷರು, ಕನ್ನಡ ನಿರುದ್ಯೋಗಿಗಳ ಹಿತರಕ್ಷಣಾ ವೇದಿಕೆ( ರಿ) ವಿದ್ಯಾನಗರ, ಹಾಸನ ಇವರು ಮನವಿಯನ್ನು ಸಲ್ಲಿಸಿ ದಿನಾಂಕ: 23–12–2012ರಂದು ಭಾನುವಾರ ಸಂಜೆ 6.00ಗಂಟೆಗೆ ಜಿಲ್ಲೆ/ತಾಲ್ಲೂಕುಗಳನ್ನೊಳಗೊಂಡಂತೆ ಕನ್ನಡ ಸಾಹಿತ್ಯ ಪರಿಷತ್ ಮೈದಾನ, ಹಾಸನ ಇಲ್ಲಿ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಉದ್ದೇಶಿಸಿದ್ದು, ಇದರ ವೆಚ್ಚವನ್ನು ಭರಿಸಲು ಹಾಸನ ಜಿಲ್ಲಾ ಪಂಚಾಯಿತಿಯಿಂದ ಧನ ಸಹಾಯ ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ಕನ್ನಡ ನಿರುದ್ಯೋಗಿಗಳ ಹಿತರಕ್ಷಣಾ ವೇದಿಕೆ (ರಿ) ವಿದ್ಯಾನಗರ, ಹಾಸನ ಇವರು ಕೋರಿರುವಂತೆ ದಿ: 23–12–2012ರಂದು ಆಚರಿಸಿರುವ ಕನ್ನಡ ರಾಜ್ಯೋತ್ಸವ ಸಮಾರಂಭಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ. 5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನ ಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 9 | ಶಿಥಿಲಗೊಂಡಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಳೆ ಯಡೇಗೌಡನಹಳ್ಳಿ ಹೊ.ನ.ಪುರ ತಾ: ಶಾಲಾ ಕೊಠಡಿಯನ್ನು ನೆಲಸಮ ಗೊಳಿಸಲು ಅನುಮತಿ ನೀಡುವಂತೆ ಕೋರಿ. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(8)ಟಿಷಧ:೦10/2012–13 ದಿನಾಂಕ: 08–01–2013ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಪ್ರಸ್ತಾವನೆಯನ್ನು ಸಲ್ಲಿಸಿ ಹೊಳೆನರಸೀಪುರ ತಾಲ್ಲೂಕಿನ ಹಿರಿಯ ಪ್ರಾಥಮಿಕ ಶಾಲೆ, ಯಡೇಗೌಡನಹಳ್ಳಿಯ ಎರಡು ಕೊಠಡಿಗಳು ಶಿಥಿಲಗೊಂಡಿದ್ದು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಹೊಳೆನರಸೀಪುರ ರವರು ಸದರಿ ಕೊಠಡಿಗಳು ಉಪಯೋಗಕ್ಕೆ ಯೋಗ್ಯವಿಲ್ಲದಿರುವುದಾಗಿ ಸ್ಥಳ ಪರಿಶೀಲಿಸಿ ವರದಿ ಮಾಡಿರುತ್ತಾರೆ. ಅದರಂತೆ, ಶಿಥಿಲಗೊಂಡಿರುವ ಶಾಲಾ ಕೊಠಡಿಯನ್ನು ನೆಲಸಮಗೊಳಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುವಂತೆ ಹೊಳೆನರಸೀಪುರ ತಾ: ಯಡೇಗೌಡನಹಳ್ಳಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯ ಶಿಥಿಲಗೊಂಡಿರುವ ಎರಡು ಕೊಠಡಿಗಳನ್ನು ನೆಲಸಮಗೊಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | | ಕ್ರಮ ವಹಿಸಿರುವುದಿಲ್ಲ. ಹೊಸ ಕಂಬಗಳನ್ನೂ ಸಹ ತರಿಸಲಾಗಿದೆ. ಹಳೆಯ ಕಂಬಗಳನ್ನು ತೆರವುಗೊಳಿಸಿ ಹೊಸ ಕಂಬಗಳನ್ನು ಹಾಕಲು ಕ್ರಮ ವಹಿಸಬೇಕೆಂದು ಕೋರಿದರು.<br>ಕಾರ್ಯಪಾಲಕ ಅಭಿಯಂತರರು, ಚೆಸ್ಕಾಂರವರು ಮಾತನಾಡುತ್ತಾ, ಬೀಳುವ ಸ್ಥಿತಿಯಲ್ಲಿರುವ ಕಂಬಗಳನ್ನು ತೆರವುಗೊಳಿಸಲು ಟೆಂಡರ್ ಕರೆಯಲಾಗಿದ್ದು, ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಬೀಳುವ ಸ್ಥಿತಿಯಲ್ಲಿರುವ ಕಂಬಗಳ ಬಗ್ಗೆ ಗಂಭೀರವಾಗಿ ಪರಿಗಣಿಸಿ ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಉಪಕಾರ್ಯದರ್ಶಿ (ಅಭಿವೃದ್ಧಿ)ರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸುವುದಾಗಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಧೀಕ್ಷಕ ಅಭಿಯಂತರರು ತಿಳಿಸಿರುತ್ತಾರೆ. ಆದ್ದರಿಂದ, ಈ ಬಗ್ಗೆ ಕ್ರಮ ವಹಿಸುವಂತೆ ತಿಳಿಸಿದರು.<br>ಸಭೆಯಲ್ಲಿ ಹಾಜರಿದ್ದ ಕಾರ್ಯಪಾಲಕ ಅಭಿಯಂತರರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಲ್ಲಿ ಆರ್.ಟಿ.ಜಿ.ಎಸ್ ಅಡಿಯಲ್ಲಿ ಹಣ ಪಾವತಿಯಾಗುತ್ತಿದ್ದು, ಯಾವ ಯೋಜನೆಗೆ ಹಣ ಪಾವತಿ ಯಾಗಿದೆ ಎಂದು ಮಾಹಿತಿಯಿರುವುದಿಲ್ಲ. ಆದ್ದರಿಂದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ಯಾವ ಯೋಜನೆಗೆ ಹಣ ಪಾವತಿ ಮಾಡಿದೆ ಎಂಬ ಬಗ್ಗೆ ಯೋಜನೆವಾರು ವಿವರ ನೀಡಿದಲ್ಲಿ ತಕ್ಷಣವೇ ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಮುಂದುವರೆದು, ರೈತರು ನೀರಾವರಿ ಪಂಪ್‌ಸೆಟ್‌ಗಳಿಗೆ ಅನಧಿಕೃತವಾಗಿ ವಿದ್ಯುತ್ ಸಂಪರ್ಕವನ್ನು ಪಡೆಯುತ್ತಿದ್ದಾರೆ. ಇದರಿಂದ, ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದೆ. ಆದ್ದರಿಂದ, ಈಗ ಕುಡಿಯುವ ನೀರಿನ ಯೋಜನೆಗಳಿಗೆ ಪ್ರತ್ಯೇಕ ಟಿ.ಸಿ.ಯನ್ನು ಹಾಕಲು ಕ್ರಮ ವಹಿಸಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್‌ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಬಿಕ್ಕೋಡು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸೆಕ್ಷನ್ ಆಫೀಸನ್ನು ಪ್ರಾರಂಭ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೋರಲಾಗಿತ್ತು. ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂದು ವಿವರ ನೀಡುವಂತೆ ಕೋರಿದರು.<br>ಕಾರ್ಯಪಾಲಕ ಅಭಿಯಂತರರು, ಚೆಸ್ಕಾಂರವರು ಮಾತನಾಡುತ್ತಾ, ಈ ಬಗ್ಗೆ ಪ್ರಸ್ತಾವನೆಯನ್ನು ಕೆ.ಪಿ.ಟಿ.ಸಿ.ಎಲ್ ಗೆ ಸಲ್ಲಿಸಲಾಗಿದ್ದು, ಬೋರ್ಡ್ ಆಫ್ ಡೈರೆಕ್ಟರ್ ಸಭೆಯಲ್ಲಿ ಚರ್ಚಿಸಿ ಕ್ರಮ ವಹಿಸಬೇಕಿರುತ್ತದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಹೊಯ್ಸಳ ಸಭಾಂಗಣದಲ್ಲಿರುವ ಚೇರ್‌ಗಳಲ್ಲಿನ ಕುಷನ್‌ಗಳು ತುಂಬಾ ಹಳೆಯದಾಗಿರುತ್ತವೆ. ಆದ್ದರಿಂದ ಕುಷನ್‌ಗಳನ್ನು ಬದಲಾಯಿಸಿ ಹೊಸ ಕುಷನ್‌ಗಳನ್ನು ಅಳವಡಿಸಲು ಕ್ರಮ ವಹಿಸಬೇಕೆಂದು ಕೋರಿದರು. | |
| 5 | ಕಾನೂನು ದಿನಾಚರಣೆ ಆಚರಿಸಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಅ(8)1932:ಝಡ್‌ಪಿಹೆಚ್–42 ಇತರೆ: 2012 ದಿನಾಂಕ: 30-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಹಾಸನ ಜಿಲ್ಲೆಯ ವಕೀಲರ ಸಂಘದ ವತಿಯಿಂದ ದಿನಾಂಕ: 26-11-2012ರಂದು ಕಾನೂನು ದಿನಾಚರಣೆ ಅಂಗವಾಗಿ ವಕೀಲರಿಗೆ ಕ್ರೀಡಾಕೂಟವನ್ನು ಏರ್ಪಡಿಸಲಾಗಿದ್ದು, ಸದರಿ ಕ್ರೀಡಾಕೂಟದ ವೆಚ್ಚವನ್ನು ಭರಿಸಲು ಹಾಸನ ಜಿಲ್ಲಾ ಪಂಚಾಯಿತಿಯಿಂದ ರೂ.25000/–ಗಳ ಧನಸಹಾಯ ನೀಡುವಂತೆ ಅಧ್ಯಕ್ಷರು, ಲಾ ಅಸೋಸಿಯೇಷನ್, ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ಲಾ ಅಸೋಸಿಯೇಷನ್, ಹಾಸನ ಇವರು ಕೋರಿರುವಂತೆ ದಿನಾಂಕ: 26-11-2012ರಂದು ಕಾನೂನು ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/–(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

ಪ್ರತಿನಿಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಉತ್ತರಿಸುತ್ತಾ, ಬಿ.ಪಿ.ಎಲ್ ಕಾರ್ಡ್ ಹೊಂದಿರುವವರಿಗೆ ಇಬ್ಬರು ಹೆಣ್ಣುಮಕ್ಕಳಿಗೆ ಮಾತ್ರ ಭಾಗ್ಯಲಕ್ಷ್ಮಿ ಬಾಂಡ್‌ಅನ್ನು ನೀಡಲಾಗುತ್ತದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಕೃಷಿ ಮತ್ತು ಕೈಗರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, 37 ಅಂಗನವಾಡಿ ಕಟ್ಟಡಗಳ ಕಾಮಗಾರಿಯನ್ನು ಪ್ರಾರಂಭ ಮಾಡಲಾಗಿದೆಯೇ ಎಂಬ ಬಗ್ಗೆ ವಿವರ ನೀಡುವಂತೆ ಕೋರಿದರು.

ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, 37 ಅಂಗನವಾಡಿ ಕಟ್ಟಡ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳಿಗೆ ಅವಶ್ಯವಿದ್ದ ಹೆಚ್ಚುವರಿ ಅನುದಾನಕ್ಕೆ ಸಂಬಂಧಿಸಿದಂತೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ತಕ್ಷಣವೇ ಕಾಮಗಾರಿಗಳನ್ನು ಪ್ರಾರಂಭಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಎಂ.ಎ.ರಂಗಸ್ವಾಮಿರವರು ಮಾತನಾಡುತ್ತಾ, ನುಗ್ಗೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರ ಅವಶ್ಯಕತೆಯಿದ್ದು, ತಗಡೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರು ನುಗ್ಗೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬರಲು ಅಸಕ್ತರಾಗಿರುತ್ತಾರೆ. ಆದ್ದರಿಂದ ವೈದ್ಯರನ್ನು ತಗಡೂರು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ನುಗ್ಗೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ನಿಯೋಜನೆ ಮಾಡಲು ಕ್ರಮ ವಹಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ಕೋರಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ವೈದ್ಯರನ್ನು ಒಂದು ಆಸ್ಪತ್ರೆಯಿಂದ ಇನ್ನೊಂದು ಆಸ್ಪತ್ರೆಗೆ ನಿಯೋಜನೆ ಮಾಡಬಾರದೆಂದು ಕೇಂದ್ರ ಕಛೇರಿಯಿಂದ ನಿರ್ದೇಶನವಿರುತ್ತದೆ. ಆದ್ದರಿಂದ ಜಿಲ್ಲಾ ಪಂಚಾಯಿತಿ ವತಿಯಿಂದ ಕ್ರಮ ವಹಿಸಬಹುದಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.

ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಈ ಬಗ್ಗೆ ಕೇಂದ್ರ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಿ ಕ್ರಮ ವಹಿಸುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ ಚರಂಡಿ ಕಾಮಗಾರಿಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿರುವುದಿಲ್ಲ. ಈ ಬಗ್ಗೆ ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.

ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ನೀರನ್ನು ಒದಗಿಸಲು ಬಹುಗ್ರಾಮ ಯೋಜನೆಯನ್ನು ಸಿದ್ಧಪಡಿಸಿ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕೆಂದು ಕೋರಿದರು.

ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಬಹುಗ್ರಾಮ ಯೋಜನೆಯ ಅನುಷ್ಠಾನದ ಬಗ್ಗೆ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ವಿಸ್ತೃತವಾಗಿ ಚರ್ಚೆ ಮಾಡಲಾಗಿದ್ದು, ಪ್ರಸ್ತಾವನೆಯನ್ನು ಸಿದ್ಧಪಡಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ಕಲ್ಲುಸಾದರಹಳ್ಳಿ ಗ್ರಾಮದಲ್ಲಿ ವಿದ್ಯುತ್ ಕಂಬಗಳು ಬೀಳುವ ಸ್ಥಿತಿಯಲ್ಲಿದ್ದರೂ ಸಹ ಚೆಸ್ಕಾಂ ಅಧಿಕಾರಿಗಳು ಕಂಬಗಳನ್ನು ತೆರವುಗೊಳಿಸಲು ಯಾವುದೇ

ಉಪಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಶಿಕ್ಷಣ ಇಲಾಖೆಯಲ್ಲಿ ಹೆಚ್ಚಿನ ಅನುದಾನವಿದ್ದು, ಸದರಿ ಹಣವನ್ನು ಬ್ಯಾಂಕಿನಲ್ಲಿ ಇಡುವುದರಿಂದ, ಬಡ್ಡಿ ಹಣ ಬರುತ್ತದೆ. ಅಲ್ಲದೆ ಟ್ರಾನ್ಸ್‌ಫಾರ್ಮರ್ ಸ್ಥಳಾಂತರದ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಯವರೊಂದಿಗೆ ಚರ್ಚೆ ಮಾಡಲಾಗಿದೆ. ಉಳಿತಾಯದ ಮೊತ್ತದಲ್ಲಿ ಚೆಸ್ಕಾಂ ಅಧಿಕಾರಿಯವರಿಂದ ಪರಿಷ್ಕೃತ ಅಂದಾಜುಪಟ್ಟಿಯನ್ನು ಸಿದ್ದಪಡಿಸಿ ಠೇವಣಿ ಹಣವನ್ನು ಪಾವತಿ ಮಾಡಲು ತಿಳಿಸಲಾಗಿದೆ. ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂದು 15 ದಿನಗಳ ಒಳಗೆ ವರದಿಯನ್ನು ನೀಡುವಂತೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎಂ.ಎ.ರಂಗಸ್ವಾಮಿರವರು ಮಾತನಾಡುತ್ತಾ, ಪ್ರೌಢಶಾಲಾ ಶಿಕ್ಷಕರಿಗೆ ನಿರಂತರ ಮತ್ತು ವ್ಯಾಪಕ ಮೌಲ್ಯಮಾಪನ ತರಬೇತಿಯನ್ನು ನೀಡಲಾಗುತ್ತಿದೆ. ಶೈಕ್ಷಣಿಕ ವರ್ಷ ಮುಕ್ತಾಯವಾಗುತ್ತಿದ್ದು, ಇನ್ನೂ ಪಾಠ ಪ್ರವಚನಗಳನ್ನು ಮಾಡುವುದು ಬಾಕಿಯಿದ್ದು, ತರಬೇತಿಯಿಂದ ಶಿಕ್ಷಕರಿಗೆ ಪಾಠಪ್ರವಚನಗಳನ್ನು ಮಾಡಲು ತೊಂದರೆಯಾಗುತ್ತಿದೆ. ಆದ್ದರಿಂದ ತರಬೇತಿಯನ್ನು ರಜಾ ಸಮಯದಲ್ಲಿ ಅಥವಾ ವರ್ಷದ ಪ್ರಾರಂಭದಲ್ಲಿ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಚನ್ನರಾಯಪಟ್ಟಣ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಯವರು ಎಲ್ಲಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಿಂದ ಈ ವರ್ಷ ಶೇ.100ರಷ್ಟು ಫಲಿತಾಂಶವನ್ನು ಪಡೆಯುವುದಾಗಿ ಪ್ರಮಾಣ ಪತ್ರವನ್ನು ಪಡೆದಿರುತ್ತಾರೆ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ತಿಳಿಸಿದರು.

ಉಪಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಪ್ರೌಢಶಾಲಾ ಶಿಕ್ಷಕರಿಗೆ ನಿರಂತರ ಮತ್ತು ವ್ಯಾಪಕ ಮೌಲ್ಯಮಾಪನ ತರಬೇತಿಯನ್ನು ಶೈಕ್ಷಣಿಕ ವರ್ಷದ ಆರಂಭದಲ್ಲಿಯೇ ನೀಡಲು ಕ್ರಮ ವಹಿಸುವಂತೆ ತಿಳಿಸಿದರು.

ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಉತ್ತರಿಸುತ್ತಾ, ಚನ್ನರಾಯಪಟ್ಟಣ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಯವರು ಎಲ್ಲಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಿಂದ ಈ ವರ್ಷ ಶೇ.100ರಷ್ಟು ಫಲಿತಾಂಶವನ್ನು ಪಡೆಯುವುದಾಗಿ ಪ್ರಮಾಣ ಪತ್ರವನ್ನು ಉತ್ತಮ ಫಲಿತಾಂಶವನ್ನು ಪಡೆಯುವ ಉದ್ದೇಶದಿಂದ ಪಡೆದಿರುತ್ತಾರೆ. ಇದು ಕಡ್ಡಾಯವಾಗಿರುವುದಿಲ್ಲ. ಈ ಬಗ್ಗೆ ಈಗಾಗಲೇ ಕ್ಷೇತ್ರ ಶಿಕ್ಷಣಾಧಿಕಾರಿವರಿಗೆ ಆ ರೀತಿ ಪ್ರಮಾಣ ಪತ್ರವನ್ನು ಪಡೆಯದಂತೆ ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ಕಲ್ಲುಸಾದರಹಳ್ಳಿ ಪರಿಶಿಷ್ಟ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಕಟ್ಟಡಕ್ಕೆ ನಿವೇಶನವನ್ನು ನೀಡಲಾಗಿದ್ದು, ನಿವೇಶನದ ಹಣ ಸಂದಾಯವಾಗಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.

ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಯವರು ಉತ್ತರಿಸುತ್ತಾ, ಕಲ್ಲುಸಾದರಹಳ್ಳಿ ಪರಿಶಿಷ್ಟ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಕಟ್ಟಡಕ್ಕೆ ನಿವೇಶನದ ಹಣವನ್ನು ನೀಡುವಂತೆ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಹಲವಾರು ಬಾರಿ ಪತ್ರವನ್ನು ಬರೆಯಲಾಗಿದೆ ಮತ್ತು ಕೇಂದ್ರ ಕಚೇರಿ ಸಭೆಗಳಲ್ಲಿಯೂ ನಿರ್ದೇಶಕರ ಗಮನಕ್ಕೆ ತರಲಾಗಿದೆ. ನಿರ್ದೇಶನಾಲಯದಿಂದ ಅನುದಾನವನ್ನು ಬಿಡುಗಡೆ ಮಾಡಿದ ಕೂಡಲೇ ಮಾನ್ಯ ಸದಸ್ಯರಿಗೆ ಹಣವನ್ನು ನೀಡಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಒಂದು ಹೆಣ್ಣು ಮಗುವಿಗೆ ಮಾತ್ರ ಭಾಗ್ಯಲಕ್ಷ್ಮಿ ಬಾಂಡ್ ಅನ್ನು ನೀಡುವುದಾಗಿ ತಿಳಿಸಿದ್ದಾರೆ. ಎಷ್ಟು ಹೆಣ್ಣು ಮಕ್ಕಳಿಗೆ ಭಾಗ್ಯಲಕ್ಷ್ಮಿ ಬಾಂಡ್ ನೀಡಲು ಅವಕಾಶವಿದೆ ಎಂಬ ಬಗ್ಗೆ ವಿವರವನ್ನು ನೀಡಬೇಕೆಂದು ಕೋರಿದರು.

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಎಂ.ಎ.ರಂಗಸ್ವಾಮಿರವರು ಮಾತನಾಡುತ್ತಾ, ಕಾಂಟಿನ್‌ಜೆಂಟ್ ಕ್ರಿಯಾ ಯೋಜನೆಯಡಿಯಲ್ಲಿ ಚನ್ನರಾಯಪಟ್ಟಣ ತಾಲ್ಲೂಕಿಗೆ 179 ಕೊಳವೆ ಬಾವಿಗಳನ್ನು ಸೇರಿಸಿದ್ದು, ಅದರಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಎ.ಬಿ.ನಂಜುಂಡೇಗೌಡರವರು ಮಾತನಾಡುತ್ತಾ, ತಮ್ಮ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ಆದರೆ ಕೊಳವೆ ಬಾವಿಗಳನ್ನು ಕೊರೆಯವ ಬಗ್ಗೆ ತಮ್ಮ ಗಮನಕ್ಕೆ ತಂದಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರುಗಳು ಗಮನಹರಿಸಿ ಅಗತ್ಯ ಠೇವಣಿಯನ್ನು ಪಾವತಿಸಲು ಕ್ರಮ ವಹಿಸುವಂತೆ ಮತ್ತು ಅನುದಾನವನ್ನು ವ್ಯಪಗತ ಮಾಡದೆ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ವಿನಿಯೋಗಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್‌ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಮಲೆನಾಡು ಪ್ರದೇಶಗಳಲ್ಲಿ 100 ಅಡಿಯಿಂದ 150 ಅಡಿಯವರೆಗೆ ಕೇಸಿಂಗ್ ಪೈಪ್‌ಗಳನ್ನು ಅಳವಡಿಸಬೇಕಾಗುತ್ತದೆ. ಆದ್ದರಿಂದ, ಕೊಳವೆ ಬಾವಿಗಳಿಗೆ ಈಗ ನಿಗದಿಪಡಿಸಿರುವ ಅನುದಾನ ಸಾಕಾಗುವುದಿಲ್ಲ. ಹೆಚ್ಚಿನ ಅನುದಾನವನ್ನು ನಿಗದಿಪಡಿಸಬೇಕೆಂದು ಕೋರಿದರು.<br>ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮಲೆನಾಡು ಪ್ರದೇಶಗಳಲ್ಲಿನ ಕೊಳವೆ ಬಾವಿಗಳಿಗೆ ರೂ.1,000,00/-ದವರೆಗೆ ನಿಗದಿಪಡಿಸಲು ಅವಕಾಶ ಮಾಡಲಾಗಿದೆ. ಈ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬೇಲೂರು ಇಲ್ಲಿಯ ಕಛೇರಿಯಲ್ಲಿ ಪೀಠೋಪಕರಣಗಳು ಇಲ್ಲದೆ ಅಧಿಕಾರಿ/ಸಿಬ್ಬಂದಿಯವರಿಗೆ ಕೆಲಸ ವನ್ನು ನಿರ್ವಹಿಸಲು ತೊಂದರೆಯಾಗಿರುತ್ತದೆ. ಆದ್ದರಿಂದ ಜಿಲ್ಲಾ ಪಂಚಾಯಿತಿ ನಿರ್ವಹಣಾ ವೆಚ್ಚದಲ್ಲಿ ಹೊಸದಾಗಿ ಪೀಠೋಪಕರಣಗಳನ್ನು ಖರೀದಿಸಿ ನೀಡಬೇಕೆಂದು ಕೋರಿದರು.<br>ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅರಕಲಗೂಡು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗದ ಕಛೇರಿಯ ಕಟ್ಟಡವು ತುಂಬಾ ಹಳೆಯದಾಗಿದ್ದು, ಸುಣ್ಣ ಬಣ್ಣ ಹೊಡೆಯಲು ಅನುದಾನವನ್ನು ಬಿಡುಗಡೆ ಮಾಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮತ್ತು ಶ್ರೀ ಅಮಿತ್ ಕುಮಾರ್ ಶೆಟ್ಟಿ ಮತ್ತು ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯ ವತಿಯಿಂದ ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಅವರಿಗೆ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾಲ್ಲೂಕು ಮಗ್ಗೆ ಗ್ರಾಮಕ್ಕೆ 5 ಶಾಲಾ ಕೊಠಡಿಗಳು ಮಂಜೂರಾಗಿದ್ದು, ಆದರೆ, ಕೊಠಡಿಗಳನ್ನು ನಿರ್ಮಿಸುವ ಸ್ಥಳದಲ್ಲಿ ಟ್ರಾನ್ಸ್‌ಫಾರ್ಮರ್ ಇದ್ದು, ಅದನ್ನು ಸ್ಥಳಾಂತರ ಮಾಡಲು ಚೆಸ್ಕಾಂ ಅಧಿಕಾರಿಗಳು ರೂ.1.30ಲಕ್ಷಗಳ ಠೇವಣಿಯನ್ನು ಕಟ್ಟಬೇಕೆಂದು ತಿಳಿಸಿದ್ದು, ಟ್ರಾನ್ಸ್‌ಫಾರ್ಮರ್ ಅನ್ನು ಸ್ಥಳಾಂತರ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br><br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಮಾತನಾಡುತ್ತಾ, ಟ್ರಾನ್ಸ್‌ಫಾರ್ಮರ್ ಸ್ಥಳಾಂತರ ಮಾಡಲು ಠೇವಣಿಯನ್ನು ಪಾವತಿಸಲು ಯಾವುದೇ ಅನುದಾನ ಲಭ್ಯವಿರುವುದಿಲ್ಲ. ಜಿಲ್ಲಾ ಪಂಚಾಯಿತಿಯಿಂದ ಪಾವತಿಸಬೇಕೆಂದು ಕೋರಿದರು. | |

ಎಲ್ಲಾ ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ನಿಗಧಿತ ಅವಧಿಯಲ್ಲಿ ಸಿದ್ಧಪಡಿಸಲು ಸಾಧ್ಯವಾಗುವುದಿಲ್ಲ. ಆರ್ಥಿಕ ವರ್ಷ ಮುಕ್ತಾಯದ ಹಂತದಲ್ಲಿದ್ದು, ಇದರಿಂದ ಕಾಮಗಾರಿ ಅನುಷ್ಠಾನವಾಗುವುದಿಲ್ಲ. ಆದ್ದರಿಂದ, ಹೊರಗುತ್ತಿಗೆ ಆಧಾರದಲ್ಲಾದರೂ ಹೆಚ್ಚಿನ ಸಿಬ್ಬಂದಿಯನ್ನು ನೇಮಕ ಮಾಡಿಕೊಂಡು ನಿಗಧಿತ ಅವಧಿಯೊಳಗೆ ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಬಿ.ಆರ್.ಸತ್ಯನಾರಾಯಣರವರು ಮಾತನಾಡುತ್ತಾ, ಹೊರಗುತ್ತಿಗೆ ಆಧಾರದ ಮೇಲೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಇಂಜಿನಿಯರನ್ನು ನೇಮಿಸಿ ಕೊಳ್ಳಲು ಅವಕಾಶವಿರುತ್ತದೆ. ಅದರನ್ವಯ ಅವಶ್ಯ ಇಂಜಿನಿಯರ್‌ಗಳನ್ನು ನೇಮಿಸಿಕೊಂಡು ಅಂದಾಜುಪಟ್ಟಿಗಳನ್ನು ತ್ವರಿತವಾಗಿ ಸಿದ್ಧಪಡಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುದ್ದೀಕರಣ ಸೌಲಭ್ಯ ಒದಗಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ಚೆಸ್ಕಾಂಗೆ ಠೇವಣಿ ಹಣವನ್ನು ಪಾವತಿ ಮಾಡಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸ ಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಮಾತನಾಡುತ್ತಾ, ಹಾಸನ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗದಲ್ಲಿ ಕೆಲಸಗಳು ಸಮರ್ಪಕವಾಗಿ ನಡೆಯುತ್ತಿಲ್ಲ. ಸಹಾಯಕ ಕಾರ್ಯಪಾಲಕ ಅಭಿಯಂತರರು ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುದ್ದೀಕರಣ ಸೌಲಭ್ಯಕ್ಕೆ ಸಂಬಂಧಿಸಿದಂತೆ, ಈ ಬಗ್ಗೆ ಚೆಸ್ಕಾಂ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡ ಬೇಕೆಂದು ಕೋರಿದರು.

ಶ್ರೀಮತಿ ಬಿ.ಜಯಶೀಲ ಜಯಶಂಕರ್‌ರವರು ಮಾತನಾಡುತ್ತಾ, ಹೆಬ್ಬಾಳು ಜಿಲ್ಲಾ ಪಂಚಾಯಿತಿ ಕ್ಷೇತ್ರದ ಶೆಟ್ಟಿಹಳ್ಳಿ ಗ್ರಾಮದ ಕುಡಿಯುವ ನೀರಿನ ಯೋಜನೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾಮಗಾರಿ ಮುಗಿದಿದ್ದು, ವಿದ್ಯುದ್ದೀಕರಣ ಸೌಲಭ್ಯವನ್ನು ನೀಡಿರುವುದಿಲ್ಲವೆಂದು, ಈ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು.

ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಪ್ರಸ್ತಾಪಿಸಿದ ವಿಷಯಗಳ ಬಗ್ಗೆ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಹಾಸನ ಇವರು ಅಗತ್ಯ ಕ್ರಮ ವಹಿಸುವುದು. ಒಬ್ಬ ಗುಮಾಸ್ತನಿಂದ ಎಲ್ಲಾ ಕಾಮಗಾರಿಗಳ ಅಂದಾಜುಪಟ್ಟಿಗಳನ್ನು ಸಿದ್ಧಪಡಿಸಲು ಸಾಧ್ಯವಾಗುವುದಿಲ್ಲ. ಈ ಬಗ್ಗೆ ಅಗತ್ಯ ಕ್ರಮ ವಹಿಸುವಂತೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಒಬ್ಬ ಸಹಾಯಕ ಅಭಿಯಂತರರಿಗೆ 7-8 ಗ್ರಾಮ ಪಂಚಾಯಿತಿಗಳನ್ನು ನೀಡಲಾಗಿದೆ. ಆದರೆ ಅವರು ಎಂ.ಪಿ/ಎಂ.ಎಲ್.ಎ/ಎಂ.ಎಲ್.ಸಿ/ ಕುಡಿಯುವ ನೀರಿನ ಯೋಜನೆಗಳು ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬರುವ ಎಲ್ಲಾ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕಾಗಿರುತ್ತದೆ. ಇದರಿಂದ, ಅವರಿಗೆ ನಿಗಧಿತ ಅವಧಿಯೊಳಗೆ ಸಮರ್ಪಕವಾಗಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಗ್ರಾಮ ಪಂಚಾಯಿತಿಗಳ ಸಂಖ್ಯೆಯನ್ನು ಕಡಿಮೆ ಮಾಡಬೇಕೆಂದು ಕೋರಿದರು.

ಚರ್ಚಿಸಲಾಗಿದ್ದು, ಇಲ್ಲಿಯವರೆಗೆ ಯಾವುದೇ ಕ್ರಮ ವಹಿಸಿರುವುದು ಕಂಡುಬಂದಿಲ್ಲ. ಆದ್ದರಿಂದ ಈ ಯೋಜನೆಯ ಅನುಷ್ಠಾನದ ಬಗ್ಗೆ ವಿವರ ನೀಡಬೇಕೆಂದು ಕೋರಿದರು.

ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಶ್ರವಣಬೆಳಗೊಳದಲ್ಲಿರುವ ಕುಡಿಯುವ ನೀರಿನ ಯೋಜನೆಯಿಂದ ಸುಮಾರು 30 ಗ್ರಾಮಗಳಿಗೆ ನೀರನ್ನು ಒದಗಿಸಬಹುದಾಗಿದ್ದು, ಅಲ್ಲಿ 100 ಹೆಚ್.ಪಿ ಮೋಟಾರನ್ನು ಅಳವಡಿಸಿರುವುದರಿಂದ, ವಿದ್ಯುತ್ ಬಿಲ್ ಹೆಚ್ಚು ಬರುತ್ತಿದೆ. ಅದರ ಬದಲಿಗೆ 25 ಹೆಚ್.ಪಿ ಮೋಟಾರನ್ನು ಅಳವಡಿಸಿ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಬಹುದಾಗಿದ್ದು, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಇವರು ಶಾಸಕರು, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಅಧ್ಯಕ್ಷರು/ಸದಸ್ಯರೊಂದಿಗೆ ಸಭೆಯನ್ನು ನಡೆಸಿ ಈ ಬಗ್ಗೆ ಸಮಗ್ರವಾಗಿ ಚರ್ಚಿಸಿ ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಸುಲೋಚನಾ ರಾಮಕೃಷ್ಣರವರು ಮಾತನಾಡುತ್ತಾ, ಬಾಗೆ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದೆ. ಅಲ್ಲಿ ತೋಟಗಾರಿಕೆ ಇಲಾಖೆಗೆ ಸೇರಿದ ಒಂದು ತೆರೆದ ಬಾವಿಯಿದ್ದು, ಅದರಲ್ಲಿನ ನೀರನ್ನು ಉಪಯೋಗಿಸದೇ ಹಾಗೆಯೇ ಇದ್ದು, ಸದರಿ ಬಾವಿಯನ್ನು ಈಗ ದುರಸ್ಥಿಪಡಿಸಲಾಗಿದೆ. ಆದರೆ, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಸದರಿ ಬಾವಿಯ ನೀರನ್ನು ಉಪಯೋಗಿಸದಂತೆ ಅಡ್ಡಿಪಡಿಸುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.

ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಬಾಗೆ ಗ್ರಾಮದಲ್ಲಿರುವ ತೋಟಗಾರಿಕೆ ಇಲಾಖೆಗೆ ಸೇರಿದ ಫಾರಂ ನಲ್ಲಿ ಪಾಳುಬಾವಿಯಿದ್ದು, ಅದನ್ನು ಐ.ಎಂ.ಐ.ಎಸ್ ಅಡಿಯಲ್ಲಿ ದುರಸ್ಥಿಪಡಿಸಲಾಗಿದೆ. ಇದನ್ನು ಉಪಯೋಗಿಸಲು ಅಡ್ಡಿಪಡಿಸಬಾರದೆಂದು ಉಪನಿರ್ದೇಶಕರು, ತೋಟಗಾರಿಕೆ ಇಲಾಖೆರವರಿಗೆ ತಿಳಿಸಿದರು.

ಉಪನಿರ್ದೇಶಕರು, ತೋಟಗಾರಿಕೆ ಇಲಾಖೆರವರು ಮಾತನಾಡುತ್ತಾ, ಬಾವಿಯನ್ನು ದುರಸ್ಥಿಪಡಿಸುವಾಗ ಇಲಾಖೆಯ ಗಮನಕ್ಕೆ ತಂದಿರುವುದಿಲ್ಲ. ಕುಡಿಯುವ ನೀರಿಗೆ ಉಪಯೋಗಿಸಲು ಯಾವುದೇ ಅಭ್ಯಂತರವಿರುವುದಿಲ್ಲವೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣರವರು ಮಾತನಾಡುತ್ತಾ, ಜಾವಗಲ್ ಜಿಲ್ಲಾ ಪಂಚಾಯಿತಿ ಕ್ಷೇತ್ರದಲ್ಲಿ 20 ಕೊಳವೆ ಬಾವಿಗಳನ್ನು ಕೊರೆಸಲಾಗಿದೆ. ಆದರೆ, ಇಲ್ಲಿಯವರೆಗೂ ಬಿಲ್ಲನ್ನು ಪಾವತಿಸಿರುವುದಿಲ್ಲ. ಆದ್ದರಿಂದ, ಜಿಲ್ಲಾ ಪಂಚಾಯಿತಿ ವತಿಯಿಂದ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ, ಎಷ್ಟು ಕೊಳವೆ ಬಾವಿಗಳಿಗೆ ಹಣವನ್ನು ಪಾವತಿ ಮಾಡಲಾಗಿದೆ ಮತ್ತು ಇನ್ನೆಷ್ಟು ಕೊಳವೆ ಬಾವಿಗಳಿಗೆ ಹಣವನ್ನು ಪಾವತಿ ಮಾಡಬೇಕಾಗಿದೆ ಎಂಬ ಬಗ್ಗೆ ಪೂರ್ಣ ವಿವರಗಳನ್ನು ನೀಡುವಂತೆ ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಕೊಳವೆ ಬಾವಿಗಳ ಪಟ್ಟಿಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಚನ್ನರಾಯ ಪಟ್ಟಣ ಇವರಿಗೆ ನೀಡಲಾಗಿದೆ. ಆದರೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಅನುಮೋದನೆಯನ್ನು ನೀಡಿರುವುದಿಲ್ಲ. ಅಂದಾಜು ಪಟ್ಟಿಯನ್ನು ಸಿದ್ಧಪಡಿಸಲು ಸಿಬ್ಬಂದಿಯಿಲ್ಲವೆಂದು ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿರುವುದಿಲ್ಲ. ನಾವು ಹೇಳಿದ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಕುಡಿಯವ ನೀರಿನ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಿಲ್ಲ. ಕೆಲವು ಗ್ರಾಮಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದು ಕಂಡುಬಂದಿರುತ್ತದೆ. ಈ ಬಗ್ಗೆ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನಗಳಿಗೆ ಸಂಬಂಧಪಟ್ಟಂತೆ ಜಿಲ್ಲಾ ಪಂಚಾಯಿತಿಯಿಂದ ತುರ್ತು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿದ್ದು, ಅದರಲ್ಲಿ ಹಾಸನ ಉಪವಿಭಾಗಕ್ಕೆ ಸಂಬಂಧಿಸಿದಂತೆ, ಸುಮಾರು ಕಾಮಗಾರಿಗಳಿರುತ್ತವೆ. ಆದರೆ ಕಾಮಗಾರಿಗಳ ಅಂದಾಜುಪಟ್ಟಿ ಸಿದ್ಧಪಡಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಹಾಸನ ಇಲ್ಲಿ ಒಬ್ಬರೇ ಗುಮಾಸ್ತರಿದ್ದು,

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ದೇವಪ್ಪ ಮಲ್ಲಿಗೆವಾಳುರವರು ಮಾತನಾಡುತ್ತಾ, ಇಲಾಖಾಧಿಕಾರಿಗಳು ಶಿಷ್ಟಾಚಾರವನ್ನು ತಪ್ಪದೇ ಪಾಲಿಸಬೇಕು ಎಂದು ತಾಕೀತು ಮಾಡಿದರು.<br>ಮಾನ್ಯ ಸದಸ್ಯರಾದ ಶ್ರೀ ಚಂದ್ರೇಗೌಡರವರು ಮಾತನಾಡುತ್ತಾ, ಅರಕಲಗೂಡು ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ಸಮರ್ಪಕವಾಗಿ ಉತ್ತರವನ್ನು ನೀಡುತ್ತಿಲ್ಲ. ಶ್ರೀ ವಿ.ಎ.ನಂಜುಂಡಸ್ವಾಮಿ ಮತ್ತು ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಹೇಳಿರುವುದು ಸರಿಯಾಗಿದೆ. ಅಧಿಕಾರಿಗಳು ಈ ಬಗ್ಗೆ ಕ್ರಮ ವಹಿಸ ಬೇಕೆಂದು ತಿಳಿಸಿದರು. ಇದಕ್ಕೆ ಮಾನ್ಯ ಸದಸ್ಯರಾದ ಶ್ರೀ ಎಂ.ಎ.ರಂಗಸ್ವಾಮಿರವರೂ ಸಹ ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳನ್ನು ಅನುಷ್ಠಾನ ಮಾಡುವಾಗ ಶಿಷ್ಟಾಚಾರವನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಅರಕಲಗೂಡು ತಾಲ್ಲೂಕು ಅಬ್ಬೂರುಮಾಚ ಗೌಡನಹಳ್ಳಿ ಗ್ರಾಮದಲ್ಲಿ 2012-13ನೇ ಸಾಲಿಗೆ ಹೊಸದಾಗಿ ಆಯುರ್ವೇದ ಚಿಕಿತ್ಸಾಲಯ ಕಟ್ಟಡದ ಉದ್ಘಾಟನೆಗೆ ಸಂಬಂಧಿಸಿದಂತೆ, ಸಮಗ್ರವಾಗಿ ತನಿಖೆಯನ್ನು ಮಾಡಿ ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಅರಕಲಗೂಡು ತಾಲ್ಲೂಕು ಅಬ್ಬೂರು ಮಾಚಗೌಡನಹಳ್ಳಿ ಗ್ರಾಮದಲ್ಲಿ 2012-13ನೇ ಸಾಲಿಗೆ ಹೊಸದಾಗಿ ಆಯುರ್ವೇದ ಚಿಕಿತ್ಸಾಲಯದ ಕಟ್ಟಡದ ಉದ್ಘಾಟನೆಗೆ ಸಂಬಂಧಿಸಿದಂತೆ ಪೂರ್ಣ ವರದಿಯನ್ನು ಮುಂದಿನ ಸಭೆಗೆ ಮಂಡಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಎಲ್ಲಾ ಇಲಾಖಾಧಿಕಾರಿಗಳು ಕಡ್ಡಾಯವಾಗಿ ಶಿಷ್ಟಾಚಾರವನ್ನು ಪಾಲಿಸಿ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಕ್ರಮ ವಹಿಸುವಂತೆ ತಿಳಿಸಿದರು. | |
| | | ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಮಾತನಾಡುತ್ತಾ, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಶೇ.80ರಷ್ಟು ಅಂತರ್ಜಲ ಬತ್ತಿಹೋಗಿದೆ. ಜಲಾಶಯಗಳಿಂದ ಪೈಪ್‌ಲೈನ್ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲು ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಅನುಮೋದನೆಗೆ ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಈ ಬಗ್ಗೆ ಮಾಹಿತಿಯನ್ನು ನೀಡುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜನಿಯರಿಂಗ್ ಉಪ ವಿಭಾಗ, ಚನ್ನರಾಯಪಟ್ಟಣರವರಿಗೆ ತಿಳಿಸಿದರು.<br>ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜನಿಯರಿಂಗ್ ಉಪ ವಿಭಾಗ, ಚನ್ನರಾಯಪಟ್ಟಣರವರು ಮಾತನಾಡುತ್ತಾ, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ 500ರಿಂದ 600 ಅಡಿಗಳವರೆಗೂ ಕೊರೆದರೂ ಸಹ ನೀರು ಸಿಗುತ್ತಿಲ್ಲ. ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಅಲ್ಲದೆ, ಕಾರ್ಯನಿರ್ವಾಹಕ ಅಧಿಕಾರಿಯವರು ಸಹ ಸಭೆಯನ್ನು ನಡೆಸಿ ಕುಡಿಯುವ ನೀರಿನ ಸಮಸ್ಯೆ ಎಲ್ಲೆಲ್ಲಿ ಇದೆ ಎಂಬ ಬಗ್ಗೆ ಪಟ್ಟಿಯನ್ನು ಸಿದ್ಧಪಡಿಸಿರುತ್ತಾರೆ ಎಂದು ಸಭೆಗೆ ವಿವರ ನೀಡಿದರು.<br><br>ಮಾನ್ಯ ಸದಸ್ಯರಾದ ಶ್ರೀ ಎ.ಬಿ.ನಂಜುಂಡೇಗೌಡರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳ ಬಗ್ಗೆ ಅಧಿಕಾರಿಗಳು ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಾರದೇ ಅವರೇ ಕಾಮಗಾರಿಗಳ ಪಟ್ಟಿಯನ್ನು ಸಿದ್ಧಪಡಿಸುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. ಶ್ರವಣ ಬೆಳಗೊಳದಲ್ಲಿ ಹಾಲಿ ಇರುವ ಕುಡಿಯುವ ನೀರಿನ ಯೋಜನೆಯಿಂದ ಅದರ ಸುತ್ತಮುತ್ತಲಿನ 25 ರಿಂದ 30 ಗ್ರಾಮಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡಬಹುದಾಗಿದ್ದು, ಈ ಬಗ್ಗೆ ಹಿಂದಿನ ಸಭೆಯಲ್ಲಿ | |

**ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಲಕ್ಷ್ಮಣಗೌಡ | ಅಧ್ಯಕ್ಷರು |
| 2 | ಶ್ರೀಮತಿ ಪಾರ್ವತಮ್ಮ ನಂಜುಂಡಾಚಾರ್ | ಸದಸ್ಯರು |
| 3 | ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳು | ಸದಸ್ಯರು |
| 4 | ಶ್ರೀಮತಿ ಶಾಂತಮ್ಮ | ಸದಸ್ಯರು |
| 5 | ಶ್ರೀಮತಿ ಸಿ.ಎನ್.ರತ್ನಮ್ಮ | ಸದಸ್ಯರು |
| 6 | ಶ್ರೀಮತಿ ಜ್ಯೋತಿ ಗುರುದೇವ್ | ಸದಸ್ಯರು |
| 7 | ಶ್ರೀ ಎಂ.ಎ.ರಂಗಸ್ವಾಮಿ ಉ: ಪಮ್ಮಿ | ಸದಸ್ಯರು |

**ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿ.ಎ.ನಂಜುಂಡಸ್ವಾಮಿ | ಅಧ್ಯಕ್ಷರು |
| 2 | ಶ್ರೀ ಪುರುಷೋತ್ತಮ | ಸದಸ್ಯರು |
| 3 | ಶ್ರೀಮತಿ ಎಂ.ವಿ.ಹೇಮಾವತಿ ಮಂಜುನಾಥ್ | ಸದಸ್ಯರು |
| 4 | ಶ್ರೀಮತಿ ಮಂಜುಳ ಭೈರಾಜು | ಸದಸ್ಯರು |
| 5 | ಶ್ರೀಮತಿ ಯಶೋದಮ್ಮ | ಸದಸ್ಯರು |
| 6 | ಶ್ರೀಮತಿ ವಸಂತ | ಸದಸ್ಯರು |
| 7 | ಶ್ರೀ ಕೃಷ್ಣಾನಾಯ್ಕ | ಸದಸ್ಯರು |

**ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಶಿವಶಂಕರ (ಕುಂಟಿ) | ಅಧ್ಯಕ್ಷರು |
| 2 | ಶ್ರೀಮತಿ ಸರೋಜಮ್ಮ | ಸದಸ್ಯರು |
| 3 | ಶ್ರೀಮತಿ ಭಾಗ್ಯ | ಸದಸ್ಯರು |
| 4 | ಶ್ರೀ ಈಶ್ವರಹಳ್ಳಿ ಲಕ್ಷ್ಮಣ | ಸದಸ್ಯರು |
| 5 | ಶ್ರೀಮತಿ ಎಸ್.ಎಲ್.ನಾಗಮಣಿ | ಸದಸ್ಯರು |
| 6 | ಶ್ರೀಮತಿ ಸುಭದ್ರ | ಸದಸ್ಯರು |
| 7 | ಶ್ರೀಮತಿ ಹೆಚ್.ಎನ್.ಗೌರಮ್ಮ | ಸದಸ್ಯರು |

| | | | |
|---|---|---|---|
| 4 | ಅರಕಲಗೂಡು ತಾ: ಅಬ್ಬೂರು ಮಾಚಗೌಡನಹಳ್ಳಿ ಗ್ರಾಮದಲ್ಲಿ ಹೊಸದಾಗಿ ನಿರ್ಮಿಸಿರುವ ಆಯುಷ್ ಇಲಾಖೆಯ ಆಯುಷ್ ಚಿಕಿತ್ಸಾಲಯ ಕಟ್ಟಡವನ್ನು ಶಿಷ್ಟಾಚಾರ ಪಾಲಿಸದೇ ಉದ್ಘಾಟನೆ ಮಾಡಿರುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಅರಕಲಗೂಡು ತಾಲ್ಲೂಕು ಅಬ್ಬೂರು ಮಾಚಗೌಡನಹಳ್ಳಿ ಗ್ರಾಮದಲ್ಲಿ 2012-13ನೇ ಸಾಲಿಗೆ ಹೊಸದಾಗಿ ಆಯುರ್ವೇದ ಚಿಕಿತ್ಸಾಲಯದ ಕಟ್ಟಡಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ಅನುದಾನವನ್ನು ಮಂಜೂರು ಮಾಡಿದ್ದು, ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆ. ಆದರೆ, ಸದರಿ ಕಟ್ಟಡವನ್ನು ಜಿಲ್ಲಾ ಪಂಚಾಯಿತಿ ಅಧ್ಯಕ್ಷರ ಮತ್ತು ಸದಸ್ಯರುಗಳ ಗಮನಕ್ಕೆ ತಾರದೇ ಉದ್ಘಾಟನೆ ಮಾಡಲಾಗಿದೆ. ಈ ಬಗ್ಗೆ ಇಲಾಖಾಧಿಕಾರಿಗಳು ಮಾಹಿತಿ ನೀಡಬೇಕೆಂದು ಕೋರಿದರು.<br>ಜಿಲ್ಲಾ ಆಯುಷ್ ಅಧಿಕಾರಿಯವರು ಮಾತನಾಡುತ್ತಾ, ಅಬ್ಬೂರು ಮಾಚಗೌಡನಹಳ್ಳಿ ಗ್ರಾಮದಲ್ಲಿ 2012-13ನೇ ಸಾಲಿಗೆ ಹೊಸದಾಗಿ ಆಯುರ್ವೇದ ಚಿಕಿತ್ಸಾಲಯದ ಕಟ್ಟಡದ ಉದ್ಘಾಟನೆಗೆ ಸಂಬಂಧಿಸಿದಂತೆ ಇಲಾಖೆಯ ಅಧಿಕಾರಿಗಳಿಗೂ ಯಾವುದೇ ಮಾಹಿತಿ ಇರುವುದಿಲ್ಲ. ಕಟ್ಟಡ ಕಾಮಗಾರಿಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಅರಕಲಗೂಡು ಇವರು ಅನುಷ್ಠಾನ ಮಾಡಿದ್ದು, ಸದರಿಯವರೇ ಮಾಹಿತಿಯನ್ನು ನೀಡಬೇಕಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.<br>ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ತಾಲ್ಲೂಕಿನಲ್ಲಿ ವಿವಿಧ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಜಿಲ್ಲಾ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿ/ ಗ್ರಾಮ ಪಂಚಾಯಿತಿ ಸದಸ್ಯರ ಗಮನಕ್ಕೆ ತಾರದೇ ಶಂಕುಸ್ಥಾಪನೆ/ಉದ್ಘಾಟನೆಯನ್ನು ಮಾಡುತ್ತಿದ್ದು, ಶಿಷ್ಟಾಚಾರವನ್ನು ಪಾಲಿಸುತ್ತಿಲ್ಲ. ಈ ಬಗ್ಗೆ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅರಕಲಗೂಡು ತಾಲ್ಲೂಕು ಅಬ್ಬೂರು ಮಾಚಗೌಡನಹಳ್ಳಿ ಗ್ರಾಮದಲ್ಲಿ 2012-13ನೇ ಸಾಲಿಗೆ ಹೊಸದಾಗಿ ಆಯುರ್ವೇದ ಚಿಕಿತ್ಸಾಲಯದ ಕಟ್ಟಡದ ಉದ್ಘಾಟನೆಗೆ ಸಂಬಂಧಿಸಿದಂತೆ ಪೂರ್ಣ ವರದಿಯನ್ನು ಮುಂದಿನ ಸಭೆಗೆ ಮಂಡಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

## ದಿನಾಂಕ: 23-01-2013ರಂದು ಪೂರ್ವಾಹ್ನ:11-00ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾನ್ಯ ಸಭೆಯ ನಡವಳಿಗಳು

**ಅಧ್ಯಕ್ಷತೆ: ಶ್ರೀಮತಿ ಡಿ.ಜಿ.ಅಂಬಿಕರಾಮಣ್ಣ**
**ಅಧ್ಯಕ್ಷರು**
**ಜಿಲ್ಲಾ ಪಂಚಾಯಿತಿ, ಹಾಸನ.**

**ಹಾಜರಿ: 44** **ಗೈರು ಹಾಜರಿ:14**

<table>
<tr><th>ಕ್ರ.ಸಂ.</th><th>ವಿಷಯ</th><th>ಚರ್ಚೆ</th><th>ತೀರ್ಮಾನ</th></tr>
<tr><td></td><td></td><td>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಹಾಜರಿದ್ದ, ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು.</td><td></td></tr>
<tr><td>1</td><td>ದಿನಾಂಕ:30-11-2012 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ.</td><td>ದಿನಾಂಕ:30-11-2012 ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವಂತೆ ಮಾನ್ಯ ಅಧ್ಯಕ್ಷರಾದ ಶ್ರೀಮತಿ ಡಿ.ಜಿ.ಅಂಬಿಕ ರಾಮಣ್ಣರವರು ಸಭೆಯನ್ನು ಕೋರಿದರು.</td><td>ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ: 30-11-2012ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು.</td></tr>
<tr><td>2</td><td>ವಿ-ನಿಯಮಗಳ ರಚನೆ ಬಗ್ಗೆ.</td><td>ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ವಿ-ನಿಯಮಗಳ ರಚನೆಗೆ ಸಂಬಂಧಿಸಿದಂತೆ, ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿ ಅವಶ್ಯಕತೆಯಿದ್ದಲ್ಲಿ ತಿದ್ದುಪಡಿಗಳನ್ನು ಮಾಡಿ ನಂತರ ಸರ್ಕಾರದ ಅನುಮೋದನೆಗೆ ಸಲ್ಲಿಸಬೇಕಾಗುತ್ತದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ವಿ-ನಿಯಮಗಳ ತಿದ್ದುಪಡಿಗೆ ಸಂಬಂಧಿಸಿದಂತೆ, ಕರಡನ್ನು ಸಮಗ್ರವಾಗಿ ಚರ್ಚಿಸಿ ತಿದ್ದುಪಡಿ ಮಾಡಲು ಕಾಲಾವಕಾಶ ಅಗತ್ಯವಿರುತ್ತದೆ. ಆದ್ದರಿಂದ, ಈ ವಿಷಯವನ್ನು ಮುಂದಿನ ಸಭೆಗೆ ಮಂಡಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.</td><td>ಸಭೆಯಲ್ಲಿ ಚರ್ಚಿಸಿದಂತೆ, ವಿ-ನಿಯಮಗಳಿಗೆ ಅವಶ್ಯವಿರುವ ತಿದ್ದುಪಡಿಯನ್ನು ಮಾಡಿ ಅಂತಿಮಗೊಳಿಸುವ ಬಗ್ಗೆ ಮಾನ್ಯ ಸದಸ್ಯರುಗಳು ಕಾಲಾವಕಾಶ ಕೋರಿದ ಹಿನ್ನೆಲೆಯಲ್ಲಿ ವಿಷಯವನ್ನು ಮುಂದಿನ ಸಭೆಗೆ ಮುಂದೂಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಿತು.</td></tr>
<tr><td>3</td><td>ವಿವಿಧ ಸ್ಥಾಯಿ ಸಮಿತಿಗಳ ರಚನೆ ಬಗ್ಗೆ.</td><td>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ವಿವಿಧ ಸ್ಥಾಯಿ ಸಮಿತಿಗಳಿಗೆ 2ನೇ ಅವಧಿಗೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ನೀಡಲಾಗಿತ್ತು. ಅದರನ್ವಯ ಈ ಕೆಳಕಂಡಂತೆ ವಿವಿಧ ಸ್ಥಾಯಿ ಸಮಿತಿಗಳಿಗೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ಆಯ್ಕೆ ಮಾಡಲಾಗಿದ್ದು, ಅನುಮೋದನೆ ನೀಡಬೇಕೆಂದು ಸಭೆಯನ್ನು ಕೋರಿದರು.
<table>
<tr><th colspan="3">ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ</th><th colspan="3">ಸಾಮಾನ್ಯ ಸ್ಥಾಯಿ ಸಮಿತಿ</th></tr>
<tr><th>ಕ್ರಸಂ</th><th>ಹೆಸರು</th><th>ಪದನಾಮ</th><th>ಕ್ರಸಂ</th><th>ಹೆಸರು</th><th>ಪದನಾಮ</th></tr>
<tr><td>1</td><td>ಶ್ರೀಮತಿ ಡಿ.ಜಿ.ಅಂಬಿಕರಾಮಣ್ಣ</td><td>ಅಧ್ಯಕ್ಷರು</td><td>1</td><td>ಶ್ರೀ ಬಿಳಿಚೌಡಯ್ಯ</td><td>ಅಧ್ಯಕ್ಷರು</td></tr>
<tr><td>2</td><td>ಶ್ರೀ ಹುಚ್ಚೇಗೌಡ</td><td>ಸದಸ್ಯರು</td><td>2</td><td>ಶ್ರೀ ಬಿ.ಡಿ.ಚಂದ್ರೇಗೌಡ</td><td>ಸದಸ್ಯರು</td></tr>
<tr><td>3</td><td>ಶ್ರೀಮತಿ ಜೆ.ಟಿ.ಇಂದಿರಾಧರ್ಮಪ್ಪ</td><td>ಸದಸ್ಯರು</td><td>3</td><td>ಶ್ರೀ ಬಿ.ಆರ್.ಸತ್ಯನಾರಾಯಣ</td><td>ಸದಸ್ಯರು</td></tr>
<tr><td>4</td><td>ಶ್ರೀಮತಿ ಸುಲೋಚನಾ ರಾಮಕೃಷ್ಣ</td><td>ಸದಸ್ಯರು</td><td>4</td><td>ಶ್ರೀ ಸ್ವಾಮಿಗೌಡ</td><td>ಸದಸ್ಯರು</td></tr>
<tr><td>5</td><td>ಶ್ರೀ ದೇವೇಗೌಡ (ಉರುಫ್ ಪಾಪಣ್ಣಿ)</td><td>ಸದಸ್ಯರು</td><td>5</td><td>ಶ್ರೀಮತಿ ಕುಸುಮ ಬಾಲಕೃಷ್ಣ</td><td>ಸದಸ್ಯರು</td></tr>
<tr><td>6</td><td>ಶ್ರೀಮತಿ ದೇವಿಕ</td><td>ಸದಸ್ಯರು</td><td>6</td><td>ಶ್ರೀಮತಿ ಜ್ಯೋತಿ ವಿ.ಪಿ</td><td>ಸದಸ್ಯರು</td></tr>
<tr><td>7</td><td>ಶ್ರೀ ಅಮಿತ್ ಕುಮಾರ್ ಶೆಟ್ಟಿ</td><td>ಸದಸ್ಯರು</td><td>7</td><td>ಶ್ರೀಮತಿ ಪಾರ್ವತಮ್ಮ</td><td>ಸದಸ್ಯರು</td></tr>
</table></td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರು 2ನೇ ಅವಧಿಗೆ ವಿವಿಧ ಸ್ಥಾಯಿ ಸಮಿತಿಗಳಿಗೆ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ಆಯ್ಕೆ ಮಾಡಿದ್ದು, ಅಧ್ಯಕ್ಷರು ಮತ್ತು ಸದಸ್ಯರುಗಳ ಪಟ್ಟಿಗೆ ಅನುಮೋದನೆ ನೀಡಲು ಸಭೆಯು ಸರ್ವಾನುಮತದಿಂದ ನಿರ್ಣಯಿಸಿತು.</td></tr>
</table>

3. ಮಾನ್ಯ ಲೋಕಸಭಾ ಸದಸ್ಯರು, ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಆಲೂರು, ಅರಕಲಗೂಡು, ಅರಸೀಕೆರೆ, ಚನ್ನರಾಯಪಟ್ಟಣ, ಬೇಲೂರು, ಹೊಳೆನರಸೀಪುರ, ಸಕಲೇಶಪುರ ಮತ್ತು ಹಾಸನ
16. ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆ, ಹಾಸನ
17. ಚೆಸ್ಕಾಂ, (ಕೆ.ಇ.ಬಿ.), ಹಾಸನ
18. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಹಾಸನ ರವರಿಗೆ ಅಗತ್ಯ ಕ್ರಮಕ್ಕಾಗಿ,
19. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಆಲೂರು, ಅರಕಲಗೂಡು, ಅರಸೀಕೆರೆ, ಚನ್ನರಾಯಪಟ್ಟಣ, ಬೇಲೂರು, ಹೊಳೆನರಸೀಪುರ, ಸಕಲೇಶಪುರ ಮತ್ತು ಹಾಸನ
20. ಕಛೇರಿ ಪ್ರತಿ.

# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/ 55 /2012-13

ದಿನಾಂಕ: 11-01-2013

## ಸಭಾಹ್ವಾನ ಪತ್ರ

ದಿನಾಂಕ: 23-01-2013ರಂದು ಬುಧವಾರ ಪೂರ್ವಾಹ್ನ: 11-00 ಗಂಟೆಗೆ ಶ್ರೀಮತಿ ಡಿ.ಜಿ.ಅಂಬಿಕರಾಮಣ್ಣ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ದಿನಾಂಕ: 30-11-2012ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ
2. ವಿ-ನಿಯಮಗಳನ್ನು ರಚಿಸುವ ಬಗ್ಗೆ.
3. ಸ್ಥಾಯಿ ಸಮಿತಿಗಳನ್ನು ಅನುಮೋದಿಸುವ ಬಗ್ಗೆ.
4. ವಂತಿಕೆಗಳನ್ನು ನೀಡುವ ಬಗ್ಗೆ
5. ಕಾನೂನು ದಿನಾಚರಣೆ ಆಚರಿಸಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವ ಕುರಿತು.
6. ರಂಗ ತರಬೇತಿ ಮತ್ತು ನಾಟಕೋತ್ಸವಕ್ಕೆ ನೆರವು ಕೋರಿ.
7. ರಾಜ್ಯಮಟ್ಟದ 5ನೇ ಕರ್ನಾಟಕ ರಂಗಸಂಗೀತ ಪರಿಷತ್ ವಾರ್ಷಿಕ ಸಮ್ಮೇಳನಕ್ಕೆ ಧನಸಹಾಯ ನೀಡುವ ಕುರಿತು.
8. ಕನ್ನಡ ರಾಜ್ಯೋತ್ಸವವನ್ನು ಆಚರಿಸಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ನೀಡುವ ಕುರಿತು.
9. ಶಿಥಿಲಗೊಂಡಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಯಡೇಗೌಡನಹಳ್ಳಿ ಹೊಳೆನರಸೀಪುರ ತಾ: ಶಾಲಾ ಕೊಠಡಿಯನ್ನು ನೆಲಸಮಗೊಳಿಸಲು ಅನುಮತಿ ನೀಡುವಂತೆ ಕೋರಿ.
10. ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಆಲೂರು ತಾಲ್ಲೂಕು, ಶಿಥಿಲಗೊಂಡಿರುವ ಶಾಲಾ ಕೊಠಡಿಯನ್ನು ನೆಲಸಮಗೊಳಿಸಲು ಅನುಮತಿ ನೀಡುವಂತೆ ಕೋರಿ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.